ವಿಜಯಪುರ | ಸಂಪುಟ 04 | ಸಂಚಿಕೆ 130 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com | RNI NO: KARKAN/2023/86203 | ರವಿವಾರ, ಜುಲೈ, 12, 2026

"ನನ್ನ ಮಗ, ಸಚಿವ ಡಾ. ಯತೀಂದ್ರ ಅವರು ಪೂಜೆ ಮಾಡದೆ ಆಹಾರ ಮುಟ್ಟುವುದಿಲ್ಲ, ನೀರನ್ನೂ ಕುಡಿಯುವುದಿಲ್ಲ. ಇಂತಹ ನಂಬಿಕೆಗಳನ್ನು ಹುಟ್ಟುಹಾಕಿರುವುದು ಮನುವಾದಿಗಳು,"



■ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಖಂಡ್ರೆ ಹೇಳಿಕೆ । ಗ್ರಾಮಗಳಲ್ಲಿ ಗರಿಗೆದರಲಿರುವ ರಾಜಕೀಯ!


# ಅಕ್ಟೋಬರ್, ನವೆಂಬರ್‌ನಲ್ಲಿ ಪಂಚಾಯತ್ ಚುನಾವಣೆ ಸಾಧ್ಯತೆ

ಬೆಂಗಳೂರು: ರಾಜ್ಯದಲ್ಲಿ ಅಕ್ಟೋಬರ್ ಅಥವಾ ನವೆಂಬರ್‌ನಲ್ಲಿ ಗ್ರಾಮ, ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತ್ ಚುನಾವಣೆಗಳು ನಡೆಯುವ ಸಾಧ್ಯತೆಯಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಖಂಡ್ರೆ ಅವರು ಶನಿವಾರ ಹೇಳಿದ್ದು, ಗ್ರಾಮೀಣ ಪ್ರದೇಶಗಳಲ್ಲಿ ರಾಜಕೀಯ ಗರಿಗೆದರಲಿದೆ.

ಸೀಮಿತಿ ವಿಂಗಡಣೆ ಪ್ರಕ್ರಿಯೆ ಮತ್ತು ಮೀಸಲಾತಿ ಮ್ಯಾಟ್ರಿಕ್ಸ್ ನಿಗದಿ ಪೂರ್ಣಗೊಂಡ ತಕ್ಷಣ, ಪಂಚಾಯತ್ ಚುನಾವಣೆ ನಡೆಸುವ ಪ್ರಸ್ತಾವನೆಯನ್ನು ರಾಜ್ಯ ಚುನಾವಣಾ ಆಯೋಗಕ್ಕೆ ಸಲ್ಲಿಸಲಾಗುವುದು ಎಂದು ಸಚಿವರು ತಿಳಿಸಿದ್ದಾರೆ.

"ಎಲ್ಲಾ ಕ್ಷೇತ್ರಗಳ ಗಡಿ ನಿರ್ಣಯ ಮತ್ತು ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯತ್‌ಗಳಿಗೆ ಮೀಸಲಾತಿಯನ್ನು ಅಂತಿಮಗೊಳಿಸಲಾಗುತ್ತಿದೆ. ಇದರ ಬಗ್ಗೆ ಸಚಿವ ಸಂಪುಟದಲ್ಲಿ ಚರ್ಚಿಸಲಾಗಿದೆ ಮತ್ತು ಮುಖ್ಯಮಂತ್ರಿ ಹಾಗೂ ಎಲ್ಲಾ ಸಚಿವರು ಗ್ರಾಮ, ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತ್ ಚುನಾವಣೆ ನಡೆಸಲು ಆಸಕ್ತಿ ಹೊಂದಿದ್ದಾರೆ" ಎಂದು ಖಂಡ್ರೆ ಹೇಳಿದ್ದಾರೆ.

ಶನಿವಾರ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ಎಲ್ಲಾ ಗ್ರಾಮ, ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತ್ ಚುನಾವಣೆಗಳು




ಅಕ್ಟೋಬರ್ ಅಥವಾ ನವೆಂಬರ್‌ನಲ್ಲಿ ನಡೆಯಲಿದೆ ಎಂದು ನಾನು ಜನರಿಗೆ ಹೇಳಲು ಬಯಸುತ್ತೇನೆ." ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಳಂಬದ ಕುರಿತ ಪ್ರಶ್ನೆಗೆ ಉತ್ತರಿಸಿದ ಅವರು, ಸರ್ಕಾರಿ ಸಿಬ್ಬಂದಿ ಪ್ರಸ್ತುತ ಖಖಖ (ವಿಶೇಷ ತೀವ್ರ ಪರಿಷ್ಕರಣೆ) ಪ್ರಕ್ರಿಯೆಯಲ್ಲಿ ನಿರತರಾಗಿದ್ದಾರೆ, ಆದ್ದರಿಂದ ಹೆಚ್ಚುವರಿ ಸಮಯವನ್ನು ಕೋರಲಾಗಿದೆ ಎಂದು ಹೇಳಿದರು.

ಇದೇ ವೇಳೆ 15ನೇ ಹಣಕಾಸು ಆಯೋಗದ ಶಿಫಾರಸುಗಳ ಅಡಿಯಲ್ಲಿ ಕರ್ನಾಟಕದ ಗ್ರಾಮ ಪಂಚಾಯಿತಿಗಳಿಗೆ ನೀಡಬೇಕಾದ 2,186.20 ಕೋಟಿ ರೂ.ಗಳನ್ನು ಕೇಂದ್ರ ಸರ್ಕಾರ ಬಿಡುಗಡೆ ಮಾಡಿಲ್ಲ ಎಂದು ಸಚಿವರು ಆರೋಪಿಸಿದರು.

ಸಾಫ್ಟ್‌ವೇರ್‌ನಲ್ಲಿನ ತಾಂತ್ರಿಕ ಸಮಸ್ಯೆಗಳನ್ನು ಉಲ್ಲೇಖಿಸಿ ಕೇಂದ್ರ ಸರ್ಕಾರ ಹಣವನ್ನು ತಡೆಹಿಡಿಯುವುದು ಸೂಕ್ತವಲ್ಲ. ಈ ವಿಷಯದ ಬಗ್ಗೆ ಸಾಮೂಹಿಕವಾಗಿ ಧ್ವನಿ ಎತ್ತುವಂತೆ ಕರ್ನಾಟಕದ ಎಲ್ಲಾ ಸಂಸದರಿಗೆ ಖಂಡ್ರೆ ಒತ್ತಾಯಿಸಿದರು.



"ಗ್ರಾಮೀಣ ಪ್ರದೇಶಗಳಿಗೆ ಕುಡಿಯುವ ನೀರು ಸರಬರಾಜು ಮಾಡಲು ಯಾವುದೇ ಹಣದ ಕೊರತೆಯಿಲ್ಲ. ಈ ಸಂಬಂಧ ಸರ್ಕಾರ ಈಗಾಗಲೇ 117 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿದೆ. ಇದಲ್ಲದೆ, ಇತ್ತೀಚಿನ ಬೆಳಗಾವಿ ವಿಭಾಗ ಮಟ್ಟದ ಸಭೆಯಲ್ಲಿ ಮುಖ್ಯಮಂತ್ರಿಗಳು ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 1 ಕೋಟಿ ರೂ.ಗಳನ್ನು ಘೋಷಿಸಿದ್ದಾರೆ. ಆದ್ದರಿಂದ, ಬರ ಪರಿಸ್ಥಿತಿ ಹೊರತಾಗಿಯೂ, ನೀರು ಸರಬರಾಜು ಖಚಿತಪಡಿಸಿಕೊಳ್ಳುವಲ್ಲಿ ಯಾವುದೇ ಆರ್ಥಿಕ ತೊಂದರೆ ಇಲ್ಲ."

■ ಈಶ್ವರ್ ಖಂಡ್ರೆ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

## 'ನನ್ನ ಮಗ ದೇವರಿಗೆ ಪೂಜೆ ಮಾಡದೆ ನೀರು ಸಹ ಕುಡಿಯೋದಿಲ್ಲ: ಸಿದ್ದರಾಮಯ್ಯ



ಬೆಂಗಳೂರು: "ನನ್ನ ಮಗ, ಸಚಿವ ಡಾ. ಯತೀಂದ್ರ ಅವರು ಪೂಜೆ ಮಾಡದೆ ಆಹಾರ ಮುಟ್ಟುವುದಿಲ್ಲ, ನೀರನ್ನೂ ಕುಡಿಯುವುದಿಲ್ಲ. ಇಂತಹ ನಂಬಿಕೆಗಳನ್ನು ಹುಟ್ಟುಹಾಕಿರುವುದು ಮನುವಾದಿಗಳು," ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಟೀಕಿಸಿದ್ದಾರೆ.

ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹೆಚ್. ಎನ್. ನಾಗಮೋಹನ ದಾಸ್ ಅವರ 'ಮೆಮೊರಬಲ್ ಟ್ರಯಲ್ಸ್' ಪುಸ್ತಕವನ್ನು ಬಿಡುಗಡೆ ಮಾಡಿದ ಬಳಿಕ ಮಾತನಾಡಿದ ಸಿದ್ದರಾಮಯ್ಯ, "ವೈದ್ಯರು, ಎಂಜಿನಿಯರ್‌ಗಳು, ಪ್ರಾಧ್ಯಾಪಕರು, ವಿಜ್ಞಾನಿಗಳು, ತಂತ್ರಜ್ಞರು ಕೂಡ ಮೂಢನಂಬಿಕೆಗಳನ್ನು ಅನುಸರಿಸುತ್ತಿದ್ದಾರೆ. ನನ್ನ ಮಗ (ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ) ವೈದ್ಯರಾಗಿದ್ದರೂ ಪ್ರತಿದಿನ ಪೂಜೆ ಮಾಡುತ್ತಾರೆ. ನಾನು ಮಾಡುವುದಿಲ್ಲ. ಏನು ಮಾಡುವುದು? ಅವರು ಪೂಜೆ ಮಾಡದೆ ಊಟ ಮಾಡುವುದಿಲ್ಲ, ನೀರು ಕುಡಿಯುವುದಿಲ್ಲ. ಅದು ಅವರ ನಂಬಿಕೆ. ಆದರೆ ಇಂತಹ ನಂಬಿಕೆಗಳನ್ನು ಸೃಷ್ಟಿಸಿದ್ದು ಮನುವಾದಿಗಳು ಎಂದರು.

ವೈಚಾರಿಕತೆಯನ್ನು ಪ್ರತಿಪಾದಿಸುವ ಹಾಗೂ ದೇವರ ಅಸ್ತಿತ್ವದ ಬಗ್ಗೆ ಸಂಶಯ ವ್ಯಕ್ತಪಡಿಸುತ್ತಿರುವ ಸಿದ್ದರಾಮಯ್ಯ ಅವರು, ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಬಳಿಕ ಮೊದಲ ಬಾರಿಗೆ ರಾಜಕೀಯೇತರ ಸಾರ್ವಜನಿಕ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಮೂಢನಂಬಿಕೆಗಳ ವಿರುದ್ಧ ಸದಾ ಧ್ವನಿಯೆತ್ತಿರುವ ಸಿದ್ದರಾಮಯ್ಯ ಅವರ ಮೊದಲ ಮುಖ್ಯಮಂತ್ರಿ ಅವಧಿಯಲ್ಲಿ 'ಕರ್ನಾಟಕ ಅಮಾನವೀಯ ದುಷ್ಟ ಪದ್ಧತಿ ಮತ್ತು ಮಾಟ-ಮಂತ್ರ ನಿಷೇಧ ಕಾಯ್ದೆ-2017' ಕರಡು ರೂಪುಗೊಂಡಿತ್ತು.

ಪ್ರಧಾನಿ ನರೇಂದ್ರ ಮೋದಿ ಅವರನ್ನು ಭಾರತದ ಮೊದಲ ಪ್ರಧಾನಿ ಪಂಡಿತ್ ಜವಾಹರಲಾಲ್ ನೆಹರೂ ಅವರೊಂದಿಗೆ ಹೋಲಿಸುವ ಪ್ರವೃತ್ತಿಯನ್ನು ಟೀಕಿಸಿದ ಸಿದ್ದರಾಮಯ್ಯ, "ನೆಹರೂ ಮತ್ತು ಮೋದಿ ಅವರನ್ನು ಹೇಗೆ ಹೋಲಿಸಬಹುದು? ಇಬ್ಬರೂ ಹೋಲಿಕೆಗೆ ಮೀರಿದವರು. ನೆಹರೂ 17 ವರ್ಷ ಪ್ರಧಾನಿಯಾಗಿದ್ದರು. ಮೋದಿ 12 ವರ್ಷ ಪೂರ್ಣಗೊಳಿಸಿದ್ದಾರೆ. ಮೋದಿ ನೆಹರೂ ದಾಖಲೆ ಮುರಿದಿದ್ದಾರೆ ಎಂದು ಹೇಳುತ್ತಾರೆ. ಇಂತಹ ವಿಷಯಗಳ ಬಗ್ಗೆ ಚರ್ಚೆಯಾಗದಿದ್ದರೆ ಸತ್ಯ ಹೇಗೆ ಹೊರಬರುತ್ತದೆ?" ಎಂದು ಪ್ರಶ್ನಿಸಿದರು.

ಸಂವಿಧಾನ ಜಾರಿಯಾಗಿ 76 ವರ್ಷಗಳಾದರೂ ಅದರ ಆದರ್ಶಗಳು ಸಂಪೂರ್ಣವಾಗಿ ಸಾಕಾರವಾಗಿಲ್ಲ ಎಂದು ಬೇಸರ ವ್ಯಕ್ತಪಡಿಸಿದ ಅವರು, "ಮನಮೋಹನ್ ಸಿಂಗ್ ಪ್ರಧಾನಿಯಾಗಿದ್ದಾಗ ಕೆಲವು ಮೂಲಭೂತ ಸಮಸ್ಯೆಗಳನ್ನು ಪರಿಹರಿಸಲು ಪ್ರಯತ್ನಿಸಿದರು. ಶಿಕ್ಷಣದ ಹಕ್ಕು, ಆಹಾರದ ಹಕ್ಕು, ಮಾಹಿತಿ ಹಕ್ಕು ಮತ್ತು ಉದ್ಯೋಗದ ಹಕ್ಕುಗಳನ್ನು ಜಾರಿಗೆ ತಂದರು. ಇವೆಲ್ಲವೂ ಸಂವಿಧಾನದಲ್ಲಿದ್ದರೂ, ಅದಕ್ಕೂ ಮೊದಲು ಪರಿಣಾಮಕಾರಿಯಾಗಿ ಅನುಷ್ಠಾನಗೊಂಡಿರಲಿಲ್ಲ ಎಂದರು.

ಈ ಪುಸ್ತಕದಲ್ಲಿ ಗ್ರೀಕ್ ತತ್ವಜ್ಞಾನಿ ಸಾಕ್ರಟೀಸ್, ಯೇಸು ಕ್ರಿಸ್ತ, ಮಹಾತ್ಮ ಗಾಂಧಿ, ಶಹೀದ್-ಎ-ಆಜಂ ಭಗತ್ ಸಿಂಗ್, ನೆಲ್ಸನ್ ಮಂಡೇಲಾ ಸೇರಿದಂತೆ ಜಗತ್ತಿನ 21 ಐತಿಹಾಸಿಕ ವಿಚಾರಣೆಗಳ ಕುರಿತು ವಿವರಿಸಲಾಗಿದೆ.

## ಸಾಂಸ್ಕೃತಿಕ ಚಟುವಟಿಕೆ ವ್ಯಕ್ತಿತ್ವ ವಿಕಸನಕ್ಕೆ ಬುನಾದಿ: ಬಂಡೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪೂರ: ವಿದ್ಯಾರ್ಥಿಗಳಿಗೆ ಪಠ್ಯದ ಜತೆ ಪಠ್ಯೇತರ ಚಟುವಟಿಕೆ ಸಹ ಮುಖ್ಯ. ಸಾಂಸ್ಕೃತಿಕ ಚಟುವಟಿಕೆ ಅವರ ಜೀವನದ ಅವಿಭಾಜ್ಯ ಅಂಗವಾಗಬೇಕು. ಅವು ಇಡೀ ಜೀವನದ ಯಶಸ್ಸು ಮತ್ತು ವ್ಯಕ್ತಿತ್ವ ವಿಕಸನಕ್ಕೆ ಭದ್ರ ಬುನಾದಿಯಾಗಿವೆ ಎಂದು ಶಿಕ್ಷಕ ಸಾಹಿತಿ ಸಂತೋಷ ಬಂಡೆ ಹೇಳಿದರು.

ಶನಿವಾರದಂದು ನಗರದ ಬಸವೇಶ್ವರ ಪದವಿಪೂರ್ವ ಕಾಲೇಜಿನಲ್ಲಿ ಹಮ್ಮಿಕೊಂಡ ಸಾಂಸ್ಕೃತಿಕ ಹಾಗೂ ಕ್ರೀಡಾ ಚಟುವಟಿಕೆಗಳ ಉದ್ಘಾಟನೆ ಹಾಗೂ 2026-27ನೇ ಸಾಲಿನ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆ, ಮಾನಸಿಕ ಒತ್ತಡ ನಿವಾರಣೆ, ದೈಹಿಕ ಸಾಮರ್ಥ್ಯ, ನಾಯಕತ್ವ ಗುಣಗಳ ಅಭಿವೃದ್ಧಿಗೆ ಸಾಂಸ್ಕೃತಿಕ ಚಟುವಟಿಕೆಗಳು ಅಗತ್ಯವಾಗಿದ್ದು, ತಮ್ಮ ಶೈಕ್ಷಣಿಕ ದಿಸೆಯಲ್ಲಿ ಅವನ್ನು ರೂಢಿಸಿಕೊಂಡಾಗ ತಮ್ಮ ಭವಿಷ್ಯ ಉಜ್ವಲವಾಗುತ್ತದೆ ಎಂದು ಹೇಳಿದರು.

ವಿದ್ಯಾರ್ಥಿಗಳು ಓದುವ, ಬರೆಯುವ, ಜ್ಞಾನದ ಜತೆಗೆ ಬದುಕಿಗೆ ಅಗತ್ಯವಾದ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಂಡು ಉತ್ತಮ ಪ್ರಜೆಗಳಾಗಬೇಕು. ಇಂದಿನ ಯುವಪೀಳಿಗೆ ಕುಟುಂಬ, ಸಮಾಜ, ದೇಶದ ಆಸ್ತಿಯಾಗುವಂತೆ ಪಾಲಕರು, ಶಿಕ್ಷಕರು ಶ್ರಮಿಸಬೇಕು. ಅವರಲ್ಲಿ ನಾನು ವಿಶ್ವಮಾನವನೆಂಬ ಪ್ರಜ್ಞೆ ಬೆಳೆಸಬೇಕು ಎಂದು ಹೇಳಿದರು.

ಉಪನ್ಯಾಸಕಿ ಡಾ.ಜಿ ಎಸ್ ಹಳ್ಳೂರ ಮಾತನಾಡಿ, ವಿದ್ಯಾರ್ಥಿ ಜೀವನ ಬಂಗಾರದ ಜೀವನ ಅದನ್ನು ಸದುಪಯೋಗ ಮಾಡಿಕೊಂಡು ಒಳ್ಳೆಯ ಅಂಕ ಪಡೆದು ಪಾಲಕರಿಗೆ ಹಾಗೂ ಕಾಲೇಜಿಗೆ ಒಳ್ಳೆಯ ಕೀರ್ತಿ ತರಬೇಕೆಂದು ಶುಭ ಹಾರೈಸಿದರು.

ಪ್ರಾಚಾರ್ಯ ಎಸ್ ಆರ್ ಕುಲಕರ್ಣಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಗುರು-ಹಿರಿಯರನ್ನು ಗೌರವಿಸುವ, ಪರಸ್ಪರ ಪ್ರೀತಿ, ಸ್ನೇಹ, ಸಹಬಾಳ್ವೆಯಿಂದ ಜೀವನ ಸಾಗಿಸುವ, ಸಕಾರಾತ್ಮಕ ಚಿಂತನೆ, ಸಮಾಜ ಸೇವೆಯಂತಹ ಜೀವನದ ಮೌಲ್ಯಗಳನ್ನು ವಿದ್ಯಾರ್ಥಿ ದೆಸೆಯಿಂದಲೇ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

## ಜು.14ರಿಂದ ಸೋಮದೇವರಹಟ್ಟಿ ತಾಂಡಾ ದುರ್ಗಾದೇವಿಯ ಜಾತ್ರೆ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ತಿಕೋಟಾ ತಾಲೂಕಿನ ಸೋಮದೇವರಹಟ್ಟಿ ತಾಂಡಾ ನಂ. 1 ರಲ್ಲಿ ಶ್ರೀ ಮಾತಾ ದುರ್ಗಾದೇವಿಯ ವಾರ್ಷಿಕ ಜಾತ್ರಾ ಮಹೋತ್ಸವ ಹಾಗೂ ಬೃಹತ್ ಧಾರ್ಮಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು ಎಲ್ಲ ತಾಂಡಾಗಳ ಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಧರ್ಮದರ್ಶಿಗಳಾದ ಡಾ. ಜಗನೂ ಮಹಾರಾಜ ಅವರು ಮನವಿ ಮಾಡಿದರು.

ನಗರದ ನವಮಿ ಮಂಗಲ ಕಾರ್ಯಾಲಯದ ಆವರಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಸುದೀರ್ಘ ಇತಿಹಾಸವಿರುವ ಈ ಧಾರ್ಮಿಕ ಕೇಂದ್ರದಲ್ಲಿ ಜುಲೈ 14ರಂದು ಅದ್ಧೂರಿ ಕಾರ್ಯಕ್ರಮಗಳು ಜರುಗಲಿವೆ ಎಂದು ತಿಳಿಸಿದ್ದಾರೆ.

ಶ್ರೀ ಮಾತಾ ದುರ್ಗಾದೇವಿ ದೇವಸ್ಥಾನವು ಸುಮಾರು 1948 ರಲ್ಲಿ ಸ್ಥಾಪನೆಯಾದ ಐತಿಹಾಸಿಕ ಹಿನ್ನೆಲೆಯನ್ನು ಹೊಂದಿದೆ. ಈ ವರ್ಷವೂ ನಿಗಮದ ಸಹಯೋಗ ಹಾಗೂ ಗ್ರಾಮಸ್ಥರ ಸಮ್ಮುಖದಲ್ಲಿ ಅತ್ಯಂತ ವಿಜೃಂಭಣೆಯಿಂದ ಜಾತ್ರಾ ಮಹೋತ್ಸವವನ್ನು ಆಯೋಜಿಸಲಾಗಿದೆ ಎಂದರು.

ಮಂಗಳವಾರ, ಜುಲೈ 14 ರ ಮಧ್ಯಾಹ್ನ 1:00 ಗಂಟೆಗೆ ಸರಿಯಾಗಿ ಮುಖ್ಯ ಧಾರ್ಮಿಕ ವಿಧಿವಿಧಾನಗಳು ಆರಂಭವಾಗಲಿವೆ. ಅಂದು ಮಧ್ಯಾಹ್ನ ಗಂಗಾಪೂಜೆ, ಮಹಾ ಮಂಗಳಾರತಿ ಹಾಗೂ ವಿಶೇಷ ಧಾರ್ಮಿಕ ಸಭೆಗಳು ಜರುಗಲಿವೆ. ಅಂದು ಖ್ಯಾತ ಚಿತ್ರನಟ ಗೋವಿಂದ್ ಅವರು ಭಾಗಿಯಾಗಲಿದ್ದಾರೆ ಎಂದು ತಿಳಿಸಿದ ಅವರು ಸಾರ್ವಜನಿಕರಿಗೆ ಮತ್ತು ಭಕ್ತಾದಿಗಳಿಗೆ ಮಹಾಪ್ರಸಾದ (ದಾಸೋಹ) ವ್ಯವಸ್ಥೆಯನ್ನು ಕಲ್ಪಿಸಲಾಗಿದೆ.


ಈಬೃಹತ್‌ಜಾತ್ರಾಮಹೋತ್ಸವದದಿವ್ಯಸನ್ನಿಧಾನವನ್ನು ಧರ್ಮದರ್ಶಿಗಳಾದ ಡಾ. ಜಗನೂ ಮಹಾರಾಜರು ವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ತಾಂಡಾ ಅಭಿವೃದ್ಧಿ ನಿಗಮದ ಅಧಿಕಾರಿಗಳು, ಸ್ಥಳೀಯ ಜನಪ್ರತಿನಿಧಿಗಳು, ಹಿರಿಯ ಮುಖಂಡರು ಹಾಗೂ ಸುತ್ತಮುತ್ತಲಿನ ಹತ್ತಾರು ಗ್ರಾಮಗಳ ಭಕ್ತಾದಿಗಳು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.ಕಾರ್ಯಕ್ರಮದ ಹೆಚ್ಚಿನ ವಿವರಗಳಿಗೆ ಹಾಗೂ ಮಾಹಿತಿಗಾಗಿ ಈ ಕೆಳಗಿನ ಮೊಬೈಲ್ ಸಂಖ್ಯೆಗಳನ್ನು ಸಂಪರ್ಕಿಸಬಹುದಾಗಿದೆ:9448441965, 9900104461, 9916842226

ಹಡಲಸಂಗ ಪ್ರಕಾಶ ಮಹಾರಾಜರು, ನಿಂಬಾಜಿ ರಾಠೋಡ, ಸಂಜೀವ ಚವ್ಹಾಣ, ವಿಜಯ್ ರಾಠೋಡ, ಡಾ. ರಮೇಶ ರಾಠೋಡ, ರಾಜೇಶ ಪವಾರ ಮಾತನಾಡಿ ಕಾರ್ಯಕ್ರಮಕ್ಕೆ ಇಂಡಿ ತಾಲೂಕಿನಿಂದ ಕನಿಷ್ಠ 2000 ಜನರನ್ನು ಕರೆದೊಯ್ಯುವ ಭರವಸೆ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ಗುತ್ತಿಗೆದಾರ ಭೀಮು ರಾಠೋಡ, ಶೇಖರ ನಾಯಿಕ್, ರಂಗನಾಥ ಚವ್ಹಾಣ, ಗಣಪತಿ ರಾಠೋಡ, ಅಶೋಕ ಜಾಧವ, ಬಾಳು ರಾಠೋಡ, ಕಿರಣ ರಾಠೋಡ ಸೇರಿದಂತೆ ಮತ್ತಿತರರು ಇದ್ದರು.

## ಸಮ್ಮೇಳನಾಧ್ಯಕ್ಷಕರಾಗಿ ಹ.ಮಾ.ಪೂಜಾರ ಆಯ್ಕೆಗೆ ಮೌಲಾಲಿ ಹರ್ಷ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಪಟ್ಟಣದ ಎಚ್.ಜಿ ಪದವಿ ಪೂರ್ವ ಕಾಲೇಜಿನಲ್ಲಿ ಇದೇ ತಿಂಗಳು 21 ಮತ್ತು 22 ರಂದು ನಡೆಯಲಿರುವ 21ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ, ಮಕ್ಕಳ ಸಾಹಿತಿ ಹ.ಮಾ ಪೂಜಾರ ಆಯ್ಕೆಯಾಗಿರುವುದಕ್ಕೆ ಹೆಡ್ ಕಾನ್ಸ್‌ಟೇಬಲ್, ಬರಹಗಾರ ಮೌಲಾಲಿ ಆಲಗೂರ ಹರ್ಷವ್ಯಕ್ತಪಡಿಸಿದ್ದಾರೆ.

ಕನ್ನಡ ಸಾಹಿತ್ಯ ಲೋಕಕ್ಕೆ ಮಕ್ಕಳ ಸಾಹಿತ್ಯದ ಕೊಡುಗೆ ಅಪಾರ. ಇಂತಹ ಶ್ರೇಷ್ಠ ಮಕ್ಕಳ ಸಾಹಿತ್ಯದ ಉನ್ನತಿಗಾಗಿ ಶ್ರಮಿಸಿದವರು ಹ.ಮಾ ಪೂಜಾರ. ತಮ್ಮ ನಲವತ್ತು ವರ್ಷಗಳ ಸುದೀರ್ಘ ಮತ್ತು ಸಾರ್ಥಕ ಶಿಕ್ಷಕ ವೃತ್ತಿಯ ಜೊತೆಗೆ ಮಕ್ಕಳ ಕಥೆ, ಕಾದಂಬರಿ, ಕವನ ಸೇರಿದಂತೆ ಮಕ್ಕಳ ಸಾಹಿತ್ಯ ಕುರಿತು ಅನೇಕ ಕೃತಿಗಳನ್ನು ಹೊರ ತಂದಿರುವ ಹಿರಿಯ ಜೀವ ಹ.ಮಾ ಪೂಜಾರ.

ಸಾವಿರಾರು ವಿಧ್ಯಾರ್ಥಿಗಳಿಗೆ ಅಕ್ಷರ ಧಾರೆ ಎರೆದ ದೈವ ಸ್ವರೂಪಿ. ನಾಡಿನಲ್ಲಿ ಮಕ್ಕಳ ಸಾಹಿತ್ಯ ವಿಜೃಂಭಿಸಲು ಇವರ ಪರಿಶ್ರಮ ಬಹಳಷ್ಟಿದೆ. ಶಿಕ್ಷಣ ಮತ್ತು ಸಾಹಿತ್ಯದ ಮೂಲಕ ಮಕ್ಕಳ ಬೌದ್ಧಿಕ ಮತ್ತು ಮಾನಸಿಕ ವಿಕಾಸವನ್ನು ಗಟ್ಟಿಗೊಳಿಸಿದ ಕೀರ್ತಿ ಹ.ಮಾ ಪೂಜಾರರದ್ದು. ಶಿಕ್ಷಕರಾಗಿ, ಮಕ್ಕಳ ಸಾಹಿತಿಯಾಗಿ, ಕನ್ನಡ ಸಾಹಿತ್ಯಕ್ಕೆ ಇವರ ಸೇವೆ ಅನನ್ಯ ಮತ್ತು ಅಮೋಘ. ಮಕ್ಕಳಿಗಾಗಿಯೇ ದುಡಿಯುತ್ತಿರುವ ಹಿರಿಯ ಚೇತನ ಹ.ಮಾ ಪೂಜಾರ. ಇವರನ್ನು ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆ ಮಾಡಿದ ಶಾಸಕ ಅಶೋಕ ಮನಗೂಳಿ, ಜಿಲ್ಲಾ ಕಸಾಪ ಅಧ್ಯಕ್ಷ ಹಾಸಿಂಪೀರ ವಾಲಿಕಾರ ಹಾಗೂ ಕಸಾಪ ತಾಲೂಕು ಅಧ್ಯಕ್ಷ ವೈ.ಸಿ ಮಯೂರ ಇವರ ಕಾರ್ಯ ಶ್ಲಾಘನೀಯ ಎಂದಿದ್ದಾರೆ.

## ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆ ಕಾರ್ಯಕ್ರಮದಲ್ಲಿ ಎಂಎಲ್ಸಿ ಸುನೀಲಗೌಡ ಪಾಟೀಲ ಸಲಹೆ

## ಕಾರ್ಯಕರ್ತರು ಸಕ್ರೀಯವಾಗಿ ಪಕ್ಷ ಸಂಘಟನೆಯಲ್ಲಿ ತೊಡಗಿಕೊಳ್ಳಬೇಕು

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ:ಸಕ್ರೀಯುವಾಗಿ ಪಕ್ಷ ಸಂಘಟನೆಯಲ್ಲಿ ತೊಡಗಿಕೊಳ್ಳಬೇಕು ಎಂದು ವಿಧಾನ ಪರಿಷತ ಸದಸ್ಯ ಸುನೀಲಗೌಡ ಪಾಟೀಲ ಹೇಳಿದ್ದಾರೆ.

ಶನಿವಾರ ನಗರದಲ್ಲಿ ಕಾತ್ರಾಳ ಗ್ರಾಮದ ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಾಂಗ್ರೆಸ್ ಸರ್ವಜನರ ಏಳಿಗೆಗಾಗಿ ಕೆಲಸ ಮಾಡುತ್ತಿದೆ. ಹೊಸ ಕಾರ್ಯಕರ್ತರ ಸೇರ್ಪಡೆಯಿಂದ ಪಕ್ಷಕ್ಕೆ ಮತ್ತಷ್ಟು ಬಲ ಬರಲಿದೆ. ಹಳಬರು, ಹೊಸಬರು ಒಗ್ಗಟ್ಟಿನಿಂದ ಪಕ್ಷ ಸಂಘಟನೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ಬಿಜೆಪಿ ತೊರೆದು ಕಾಂಗ್ರೆಸ್ ಸೇರ್ಪಡೆಯಾಗಿ ಮಾತನಾಡಿದ ಮುಖಂಡರು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಅವರ ಅಭಿವೃದ್ಧಿ ಕಾರ್ಯಗಳಿಗೆ ಮನಸೋತು ಕಾಂಗ್ರೆಸ್ ಸೇರ್ಪಡೆಯಾಗಿದ್ದೇವೆ. ಸಚಿವ ಎಂ. ಬಿ. ಪಾಟೀಲ ಮತ್ತು ಶಾಸಕ ಸುನೀಲಗೌಡ ಪಾಟೀಲ ಅವರ ಮಾರ್ಗದರ್ಶನದಲ್ಲಿ ಪಕ್ಷ ಸಂಘಟಿಸುತ್ತೇವೆ ಎಂದು ಹೇಳಿದರು.

ಕಾತ್ರಾಳ ಗ್ರಾಮದ ಹಿರಿಯರು ಮತ್ತು ಮಾಜಿ ಗ್ರಾ. ಪಂ. ಮಾಜಿ ಸದಸ್ಯ ಡಾ. ಶ್ರೀಶೈಲ ಕೊಕಟನೂರ ಹಾಗೂ ಅವರ ಬೆಂಬಲಿಗರಾದ ಹಣಮಂತ ಕೊಕಟನೂರ, ಮಹದೇವ ಕೊಕಟನೂರ, ನಾಗಪ್ಪ ಕೊಕಟನೂರ, ಸಿದ್ರಾಯ ನ್ಯಾಮಗೌಡ, ಮಲ್ಲಿಕಾರ್ಜುನ ಬಾಡಗಿ, ರಾಮಪ್ಪ ಕೊಕಟನೂರ, ಸಿದ್ರಾಯ ಕೊಕಟನೂರ, ಭೀಮಪ್ಪ ದುಂಡಪ್ಪ ಕೊಕಟನೂರ ಮುಂತಾದವರು ಪಕ್ಷಕ್ಕೆ ಸೇರ್ಪಡೆಗೊಂಡರು. ಶಾಸಕ ಸುನೀಲಗೌಡ ಪಾಟೀಲ ಅವರು ಪಕ್ಷದ ಶಾಲು ಹಾಕಿ ಪಕ್ಷಕ್ಕೆ ಬರಮಾಡಿಕೊಂಡರು.ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರಾದ ಎಂ. ಡಿ. ಪಡಸಲಗಿ, ಎಸ್. ಡಿ. ಗುಗ್ಗರಿ, ಬಾಳಪ್ಪ ಪಡಸಲಗಿ, ಗ್ರಾ. ಪಂ ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನ ಅಂಗಡಿ, ಗ್ರಾ. ಪಂ. ಮಾಜಿ ಸದಸ್ಯ ಇಮ್ತಿಯಾಜ್ ಜಮಾದಾರ, ಮಹಮ್ಮದಸಾಬ ಜಮಾದಾರ, ಗ್ಯಾರಂಟಿ ಸಮಿತಿಯ ಸದಸ್ಯರಾದ ಲಾಲಸಾಬ ಜಮಾದಾರ, ಸುರೇಶ ಚಿಕ್ಕಲಕಿ, ಹಣಮಂತ ಗಲಗಲಿ, ಇಬ್ರಾಹಿಂ ಗುರಾಡಿ ಮುಂತಾದವರು ಉಪಸ್ಥಿತರಿದ್ದರು.

### ವಿಜಯಪುರ ಜಿಲ್ಲೆಯ ಎಲ್ಲ ತಾಲೂಕುಗಳ ತಹಸೀಲ್ದಾರರಿಗೆ ಜಿಲ್ಲಾಧಿಕಾರಿ ಡಾ.ಆನಂದ್ ಕೆ. ಸೂಚನೆ

# ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಡಿಜಿಟಲೀಕರಣಕ್ಕೆ ವೇಗ ನೀಡಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯಲ್ಲಿ ನಡೆಯುತ್ತಿರುವ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್)2026ರ ಕಾರ್ಯವನ್ನು ನಿಗದಿತ ವೇಳಾಪಟ್ಟಿಯಂತೆ ಪರಿಣಾಮಕಾರಿಯಾಗಿ ಪೂರ್ಣಗೊಳಿಸುವಂತೆ ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ಡಾ. ಆನಂದ್ ಕೆ. ಅವರು ಜಿಲ್ಲೆಯ ಎಲ್ಲಾ ತಾಲೂಕುಗಳ ತಹಶೀಲ್ದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿಯಿಂದ ಜಿಲ್ಲೆಯ ಎಲ್ಲ ತಾಲೂಕು ತಹಶೀಲ್ದಾರರೊಂದಿಗೆ ನಡೆಸಿದ ವಿಡಿಯೋ ಸಂವಾದ ಸಭೆಯಲ್ಲಿ ಅವರು ಈ ಸೂಚನೆ ನೀಡಿದರು.

ತಹಸೀಲ್ದಾರರು ತಮ್ಮ ಲಾಗಿನ್‌ಗಳಲ್ಲಿ ಬೂತ್ ಮಟ್ಟದ ಅಧಿಕಾರಿಗಳು (BLO) ASDD (Absent, Shifted,Duplicate,Death) ಸಂಬಂಧಿಸಿದಂತೆ ಭರ್ತಿ ಮಾಡಿ ಸಲ್ಲಿಸಿರುವ ವಿವರಗಳನ್ನು ಕೂಲಂಕಷವಾಗಿ ಪರಿಶೀಲಿಸಬೇಕು ಹಾಗೂ ಅದಕ್ಕೆ ತಕ್ಕಂತೆ ಪೂರಕ ದಾಖಲೆಗಳನ್ನು ಖಾತ್ರಿಪಡಿಸಿಕೊಳ್ಳಬೇಕು.

ASDD ಮತದಾರರ ವಿವರಗಳನ್ನು ಸಂಬಂಧಿತ ಬೂತ್ ಮಟ್ಟದ ಏಜೆಂಟರಿಗೆ (BLA) ಹಾಗೂ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ನಿಯಮಾನುಸಾರ ಒದಗಿಸಿರುವ ಕುರಿತು ಮಾಹಿತಿ ಪಡೆಯಬೇಕು. ಈ ಇಡೀ ಪ್ರಕ್ರಿಯೆಯನ್ನು ಅತ್ಯಂತ ಪಾರದರ್ಶಕವಾಗಿ ಪೂರ್ಣಗೊಳಿಸಬೇಕು.

ಡಿಜಿಟಲೀಕರಣಕ್ಕೆ ಚುರುಕು: ಗಣತಿ ನಮೂನೆಗಳ ವಿತರಣೆಯ ಪ್ರಗತಿ ಹಾಗೂ ಡಿಜಿಟಲೀಕರಣದ (Digitization) ಕಾರ್ಯವನ್ನು ತ್ವರಿತಗೊಳಿಸಿ, ಯಾವುದೇ ಬಾಕಿ ಉಳಿಯದಂತೆ ಕ್ರಮ ಕೈಗೊಳ್ಳಬೇಕು. ಮನೆಮನೆಗೆ ಭೇಟಿ ನೀಡಿ ನಮೂನೆಗಳನ್ನು ವಿತರಿಸುವ ಹಾಗೂ ಸ್ವೀಕರಿಸಿದ ನಮೂನೆಗಳನ್ನು ತಕ್ಷಣವೇ ಡಿಜಿಟಲೀಕರಣಗೊಳಿಸುವ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸಬೇಕು.

ಜುಲೈ 11, 12 ರಂದು ವಿಶೇಷ ಅಭಿಯಾನ: ಜುಲೈ 11 ಮತ್ತು 12ರಂದು ನಡೆಯಲಿರುವ ವಿಶೇಷ ಅಭಿಯಾನ ಯಶಸ್ವಿಯಾಗಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕು. ಈ ಅವಧಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮತದಾರರನ್ನು ಸಂಪರ್ಕಿಸಿ, ಗಣತಿ ನಮೂನೆಗಳ ವಿತರಣೆ, ಸ್ವೀಕಾರ ಹಾಗೂ ಅಗತ್ಯ ತಿದ್ದುಪಡಿ ಕಾರ್ಯಗಳನ್ನು ಚುರುಕುಗೊಳಿಸಬೇಕು.

ದೂರು ಮತ್ತು ಆಕ್ಷೇಪಣೆಗಳ ವಿಲೇವಾರಿ: ಮತದಾರರಿಂದ ಸಲ್ಲಿಕೆಯಾಗುವ ಹಕ್ಕು ಮಂಡನೆಗಳು ಮತ್ತು ಆಕ್ಷೇಪಣೆಗಳು ನಿಗದಿತವಾಗಿ ನಿಯಮಾನುಸಾರ ತ್ವರಿತವಾಗಿ ವಿಲೇವಾರಿ ಆಗುವಂತೆ ಕ್ರಮ ಕೈಗೊಳ್ಳಬೇಕು. ಮತದಾರರಿಗೆ ಯಾವುದೇ ತೊಂದರೆಯಾಗದಂತೆ ಅಗತ್ಯ ಸಲಹೆ ಹಾಗೂ ಸಹಕಾರ ನೀಡಬೇಕು.

ಗೌರವಧನ ವಿತರಣೆ: ಬೂತ್ ಮಟ್ಟದ ಅಧಿಕಾರಿಗಳ ಬಿಎಲ್ಒ ಅವರಿಗೆ ನೀಡಲಾಗುವ ಗೌರವಧನವನ್ನು ಯಾವುದೇ ವಿಳಂಬವಿಲ್ಲದೆ, ಸಮಯಕ್ಕೆ ಸರಿಯಾಗಿ ವಿತರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಜಿಲ್ಲೆಯಲ್ಲಿ 18,31,696 ಗಣತಿ ನಮೂನೆ ವಿತರಣೆ

ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ

ಜಿಲ್ಲೆಯಾದ್ಯಂತ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್) ಪ್ರಕ್ರಿಯೆ ಆರಂಭಗೊಂಡಿದ್ದು, ಮತಗಟ್ಟೆ ಮಟ್ಟದ ಅಧಿಕಾರಿಗಳು ಜೂ.29 ರಿಂದ ಮನೆ ಮನೆಗೆ ಭೇಟಿ ನೀಡಿ ಮತದಾರರಿಗೆ ಗಣತಿ ನಮೂನೆಗಳನ್ನು ವಿತರಿಸುವ ಕಾರ್ಯ ಭರದಿಂದ ನಡೆದಿದ್ದು, ಇಲ್ಲಿಯವರೆಗೆ ಜಿಲ್ಲೆಯ ಪ್ರಗತಿ ವರದಿಯ ಪ್ರಕಾರ ಇಲ್ಲಿಯವರೆಗೆ 18,31,696 ಗಣತಿ ನಮೂನೆ ಮತದಾರರಿಗೆ ವಿತರಿಸಲಾಗಿದೆ. ಅವುಗಳಲ್ಲಿ 4,50,158 ಗಣಕೀಕರಣಗೊಂಡ ಗಣತಿ ನಮೂನೆಗಳಿವೆ. ಎಂದು ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ತಿಳಿಸಿದ್ದಾರೆ.

16 ಜೂನ್ 2025ರ ಮತದಾರರ ಪಟ್ಟಿಯಂತೆ ಜಿಲ್ಲೆಯಲ್ಲಿ ಒಟ್ಟು 19,82,114 ಮತದಾರರು ದಾಖಲಾಗಿದ್ದಾರೆ. ಇವರಿಗೆ ಮನೆ ಮನೆಗೆ ತೆರಳಿ ಗಣತಿ ನಮೂನೆಗಳನ್ನು ವಿತರಿಸಿ, ಅಗತ್ಯ ಮಾಹಿತಿಯನ್ನು ಸಂಗ್ರಹಿಸುವ ಕಾರ್ಯ ನಡೆಯುತ್ತಿದೆ ಎಂದವರು ತಿಳಿಸಿದ್ದಾರೆ.

ಗಣತಿ ನಮೂನೆಗಳ ವಿತರಣೆ ಮತ್ತು ಡಿಜಿಟಲೀಕರಣ ಕಾರ್ಯವು ಜೂನ್.30 ರಿಂದ ಜುಲೈ.29 ರವರೆಗೆ ನಡೆಯಲಿದ್ದು, ಈ ಅವಧಿಯಲ್ಲಿ ಮತದಾರರು ತಮ್ಮ ವಿವರಗಳನ್ನು ಪರಿಶೀಲಿಸಿ ಅಗತ್ಯ ದಾಖಲೆಗಳೊಂದಿಗೆ ನಮೂನೆಗಳನ್ನು ಸಲ್ಲಿಸಬಹುದಾಗಿದೆ.

1,528 ಮತದಾರರು ಆನ್ ಲೈನ್ ಮೂಲಕ ಗಣತಿ ನಮೂನೆಗಳನ್ನು ಸಲ್ಲಿಸಿದ್ದಾರೆ. 2,141 ಮತದಾರರು ಶಾಶ್ವತವಾಗಿ ಸ್ಥಳಾಂತರಗೊಂಡಿದ್ದಾರೆ. 3,276 ಮತದಾರರು ಮೃತಪಟ್ಟಿದ್ದಾರೆ. 824 ಮತದಾರರು ಈಗಾಗಲೇ ನೋಂದಾಯಿಸಿಕೊಂಡಿರುವುದು ಪರಿಶೀಲನೆಯಲ್ಲಿ ಕಂಡುಬಂದಿದೆ ಎಂದವರು ಸಂಗ್ರಹಿಸಲಾಗದ ಅಥವಾ ಗೈರುಹಾಜರಾಗಿರುವ ಮತದಾರರ 55 ಹಾಗೂ 44 ಇತರೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವರುಣನ ಕೃಪೆಗಾಗಿ ಮುಸ್ಲಿಂಬಾಂಧವರಿಂದ ವಿಶೇಷ ಪ್ರಾರ್ಥನೆ

■ ಉದಯರಶ್ಮಿ ದಿನಪತ್ರಿಕೆ



ತಾಳಿಕೋಟೆ: ಈ ಭಾರಿ ಮುನಿಸಿಕೊಂಡಿರುವ ವರುಣದೇವ ಕೃಪೆಗಾಗಿ ಮುಸ್ಲಿಂ ಬಾಂದವರು ಶುಕ್ರವಾರರಂದು ಪಟ್ಟಣದಲ್ಲಿ ಮುಸ್ಲಿಂ ಬಾಂದವರು ಪ್ರಾರ್ಥನೆ ಸಲ್ಲಿಸಿದ್ದಾರೆ. ಪಟ್ಟಣ ಅಂಜುಮನ್ ಪ್ರೌಢ ಶಾಲೆಯ ಹಿಂಬಾಗದಲ್ಲಿರುವ ಬಾಪುಗೌಡ ಸಂಗನಗೌಡ ಪಾಟೀಲ ಅವರ ಜಮೀನಿನಲ್ಲಿ ಒಗ್ಗೂಡಿದ ನೂರಾರು ಮುಸ್ಲಿಂ ಬಾಂಧವರು ಸಾತೋ ಶಹೀದ ಜಾಮೀಯಾ ಮಸೀದಿಯಲ್ಲಿ ಶುಕ್ರವಾರ ನಮಾಜದ ಪ್ರಾರ್ಥನೆಯ ನಂತರ ಅಂಜುಮನ್ ಶಾಲೆಯ ಮೈದಾನದವರೆಗೆ ಪಾದಯಾತ್ರೆ ಮೂಲಕ ತೆರಳಿದ ನಂತರ ಈ ವಿಶೇಷ ಪ್ರಾರ್ಥನೆಯನ್ನು ಮೌಲಾನಾ ಮೊಹಮ್ಮದ್ ಅಜರುದ್ದೀನ ಖಾಸಮಿ ಅವರ ನೇತೃತ್ವದಲ್ಲಿ ನಿರ್ವಹಿಸಿದರು.

ನಂತರ ದೇವರಲ್ಲಿ ಸಮೃದ್ಧ ಮಳೆ ಸುರಿಸುವಂತೆ ವಿಶೇಷ ಪ್ರಾರ್ಥನೆಯನ್ನು ಮಾಡಿದರು. ಈ ಸಂದರ್ಭದಲ್ಲಿ ಮುಸ್ಲಿಂ ಧಾರ್ಮಿಕ ಮುಖಂಡರಾದ ಸೈಯದ್ ಶಕೀಲ ಅಹ್ಮದ್ ಖಾಜಿ ಅವರು ಮಾತನಾಡಿ ಮುಂಗಾರು ಮಳೆ ಕೈಕೊಟ್ಟಿದ್ದರಿಂದ ನಮ್ಮ ರೈತರನ್ನು ಬಧುಕು ಒಳಗೊಂಡು ಎಲ್ಲರೂ ತೊಂದರೆಯಲ್ಲಿದ್ದಾರೆ ಇಂಥ ಸಂಕಷ್ಟದ ಸಮಯದಲ್ಲಿ ನಾವೆಲ್ಲರೂ ದೇವರ ಮೊರೆ ಹೋಗಿ ಅವನಲ್ಲಿ ಮಳೆಗಾಗಿ ಪ್ರಾರ್ಥಿಸಬೇಕಾಗಿದೆ. ಪ್ರವಾದಿ ಮಹಮ್ಮದರು ಮಳೆ ಬಾರದೆ ಇದ್ದಾಗ ತಮ್ಮ ಅನುಯಾಯಿಗಳಿಗೆ ಈ ರೀತಿಯ ವಿಶೇಷ ಪ್ರಾರ್ಥನೆಯನ್ನು ಸಲ್ಲಿಸಲು ಸೂಚಿಸಿದ್ದಾರೆ. ಆದ್ದರಿಂದ ಇವತ್ತು ನಾವೆಲ್ಲರೂ ಇಲ್ಲಿ ಸೇರಿ ವಿಶೇಷ ಪ್ರಾರ್ಥನೆಯನ್ನು ಸಲ್ಲಿಸಿದ್ದೇವೆ ಆ ದೇವರು ಆದಷ್ಟು ಬೇಗ ಸಮೃದ್ಧಿದಾಯಕ ಮಳೆ ಸುರಿಸಲೆಂದು ನಮ್ಮ ಪ್ರಾರ್ಥನೆ ಯಾಗಿದೆ ಎಂದರು.

ಸಾಮೂಹಿಕ ಪ್ರಾರ್ಥನೆಯಲ್ಲಿ ಇದಗಾ ಕಮಿಟಿ ಅಧ್ಯಕ್ಷ ಮಾಸೂಮಸಾಬ ಕೆಂಭಾವಿ, ಉಪಾಧ್ಯಕ್ಷ ಅಬ್ದುಲ್ ರಜಾಕ ಮನಗೂಳಿ, ಆಲಾ ಮಸೀದಿ ಅಧ್ಯಕ್ಷ ಅಲ್ಲಾಭಕ್ಷ ನಮಾಜಕಟ್ಟಿ, ಖಜಾಂಚಿ ರೋಷನ್ ಡೋಣಿ, ಜಮಾತೆ ಇಸ್ಲಾಮಿ ಹಿಂದ್ ಅಧ್ಯಕ್ಷ ಮುಜಾಹೀದ ಸಮಾಜಕಟ್ಟಿ, ಜಮಾತೆ ಅಹಲೆ ಹದೀಸ್ ಅಧ್ಯಕ್ಷ ಅಬ್ದುಲ್ ರಜಾಕ ನಾಲತವಾಡ, ಜಾಮಿಯಾ ಮಸೀದಿ ಅಧ್ಯಕ್ಷ ಖಾಜಾಹುಸೇನ ಸಗರ, ಮುಸ್ಲಿಂ ಬ್ಯಾಂಕ್ ಅಧ್ಯಕ್ಷ ಮಹೆಬೂಬ ಕೆಂಭಾವಿ, ನಿರ್ದೇಶಕ ಇಬ್ರಾಹಿಂ ಮನ್ಸೂರ, ಮೊಹಮ್ಮದ್ ಶಫೀಕ ಇನಾಮದಾರ, ಸಮಾಜದ ವಿವಿಧ ಸಂಘ ಸಂಸ್ಥೆಗಳ ಮುಖ್ಯಸ್ಥರು, ಗಣ್ಯರು ಹಾಗೂ ನೂರಾರು ಸಂಖ್ಯೆಯಲ್ಲಿ ಯುವಕರು ಉಪಸ್ಥಿತರಿದ್ದರು.

### ವಿಜಯಪುರ ಜಿಲ್ಲೆಯ ಎಲ್ಲ ತಾಲೂಕುಗಳ ತಹಸೀಲ್ದಾರರಿಗೆ ಜಿಲ್ಲಾಧಿಕಾರಿ ಡಾ.ಆನಂದ್ ಕೆ. ಸೂಚನೆ

# ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಡಿಜಿಟಲೀಕರಣಕ್ಕೆ ವೇಗ ನೀಡಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲೆಯಲ್ಲಿ ನಡೆಯುತ್ತಿರುವ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್) 2026ರ ಕಾರ್ಯವನ್ನು ನಿಗದಿತ ವೇಳಾಪಟ್ಟಿಯಂತೆ ಪರಿಣಾಮಕಾರಿಯಾಗಿ ಪೂರ್ಣಗೊಳಿಸುವಂತೆ ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ಡಾ. ಆನಂದ್ ಕೆ. ಅವರು ಜಿಲ್ಲೆಯ ಎಲ್ಲಾ ತಾಲೂಕುಗಳ ತಹಶೀಲ್ದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿಯಿಂದ ಜಿಲ್ಲೆಯ ಎಲ್ಲ ತಾಲೂಕು ತಹಶೀಲ್ದಾರರೊಂದಿಗೆ ನಡೆಸಿದ ವಿಡಿಯೋ ಸಂವಾದ ಸಭೆಯಲ್ಲಿ ಅವರು ಈ ಸೂಚನೆ ನೀಡಿದರು. ತಹಸೀಲ್ದಾರರು ತಮ್ಮ ಲಾಗಿನ್‌ಗಳಲ್ಲಿ ಬೂತ್ ಮಟ್ಟದ ಅಧಿಕಾರಿಗಳು (BLO) ASDD (Absent, Shifted,Duplicate,Death) ಸಂಬಂಧಿಸಿದಂತೆ ಭರ್ತಿ ಮಾಡಿ ಸಲ್ಲಿಸಿರುವ ವಿವರಗಳನ್ನು ಕೂಲಂಕಷವಾಗಿ ಪರಿಶೀಲಿಸಬೇಕು ಹಾಗೂ ಅದಕ್ಕೆ ತಕ್ಕಂತೆ ಪೂರಕ ದಾಖಲೆಗಳನ್ನು ಖಾತ್ರಿಪಡಿಸಿಕೊಳ್ಳಬೇಕು.

ASDD ಮತದಾರರ ವಿವರಗಳನ್ನು ಸಂಬಂಧಿತ ಬೂತ್ ಮಟ್ಟದ ಏಜೆಂಟರಿಗೆ (BLA) ಹಾಗೂ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ನಿಯಮಾನುಸಾರ ಒದಗಿಸಿರುವ ಕುರಿತು ಮಾಹಿತಿ ಪಡೆಯಬೇಕು. ಈ ಇಡೀ ಪ್ರಕ್ರಿಯೆಯನ್ನು ಅತ್ಯಂತ ಪಾರದರ್ಶಕವಾಗಿ ಪೂರ್ಣಗೊಳಿಸಬೇಕು.

ಡಿಜಿಟಲೀಕರಣಕ್ಕೆ ಚುರುಕು: ಗಣತಿ ನಮೂನೆಗಳ ವಿತರಣೆಯ ಪ್ರಗತಿ ಹಾಗೂ ಡಿಜಿಟಲೀಕರಣದ (Digitization) ಕಾರ್ಯವನ್ನು ತ್ವರಿತಗೊಳಿಸಿ, ಯಾವುದೇ ಬಾಕಿ ಉಳಿಯದಂತೆ ಕ್ರಮ ಕೈಗೊಳ್ಳಬೇಕು. ಮನೆಮನೆಗೆ ಭೇಟಿ ನೀಡಿ ನಮೂನೆಗಳನ್ನು ವಿತರಿಸುವ ಹಾಗೂ ಸ್ವೀಕರಿಸಿದ ನಮೂನೆಗಳನ್ನು ತಕ್ಷಣವೇ ಡಿಜಿಟಲೀಕರಣಗೊಳಿಸುವ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಜುಲೈ 11, 12 ರಂದು ವಿಶೇಷ ಅಭಿಯಾನ: ಜುಲೈ 11 ಮತ್ತು 12ರಂದು ನಡೆಯಲಿರುವ ವಿಶೇಷ ಅಭಿಯಾನ ಯಶಸ್ವಿಯಾಗಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕು. ಈ ಅವಧಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮತದಾರರನ್ನು ಸಂಪರ್ಕಿಸಿ, ಗಣತಿ ನಮೂನೆಗಳ ವಿತರಣೆ, ಸ್ವೀಕಾರ ಹಾಗೂ ಅಗತ್ಯ ತಿದ್ದುಪಡಿ ಕಾರ್ಯಗಳನ್ನು ಚುರುಕುಗೊಳಿಸಬೇಕು.

ದೂರು ಮತ್ತು ಆಕ್ಷೇಪಣೆಗಳ ವಿಲೇವಾರಿ: ಮತದಾರರಿಂದ ಸಲ್ಲಿಕೆಯಾಗುವ ಹಕ್ಕು ಮಂಡನೆಗಳು ಮತ್ತು ಆಕ್ಷೇಪಣೆಗಳು ನಿಗದಿತವಾಗಿ ನಿಯಮಾನುಸಾರ ತ್ವರಿತವಾಗಿ ವಿಲೇವಾರಿ ಆಗುವಂತೆ ಕ್ರಮ ಕೈಗೊಳ್ಳಬೇಕು. ಮತದಾರರಿಗೆ ಯಾವುದೇ ತೊಂದರೆಯಾಗದಂತೆ ಅಗತ್ಯ ಸಲಹೆ ಹಾಗೂ ಸಹಕಾರ ನೀಡಬೇಕು. ಗೌರವಧನ ವಿತರಣೆ: ಬೂತ್ ಮಟ್ಟದ ಅಧಿಕಾರಿಗಳ ಬಿಎಲ್ಒ ಅವರಿಗೆ ನೀಡಲಾಗುವ ಗೌರವಧನವನ್ನು ಯಾವುದೇ ವಿಳಂಬವಿಲ್ಲದೆ, ಸಮಯಕ್ಕೆ ಸರಿಯಾಗಿ ವಿತರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಜಿಲ್ಲೆಯಲ್ಲಿ 18,31,696 ಗಣತಿ ನಮೂನೆ ವಿತರಣೆ

ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ

ಜಿಲ್ಲೆಯಾದ್ಯಂತ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್) ಪ್ರಕ್ರಿಯೆ ಆರಂಭಗೊಂಡಿದ್ದು, ಮತಗಟ್ಟೆ ಮಟ್ಟದ ಅಧಿಕಾರಿಗಳು ಜೂ.29 ರಿಂದ ಮನೆ ಮನೆಗೆ ಭೇಟಿ ನೀಡಿ ಮತದಾರರಿಗೆ ಗಣತಿ ನಮೂನೆಗಳನ್ನು ವಿತರಿಸುವ ಕಾರ್ಯ ಭರದಿಂದ ನಡೆದಿದ್ದು, ಇಲ್ಲಿಯವರೆಗೆ ಜಿಲ್ಲೆಯ ಪ್ರಗತಿ ವರದಿಯ ಪ್ರಕಾರ ಇಲ್ಲಿಯವರೆಗೆ 18,31,696 ಗಣತಿ ನಮೂನೆ ಮತದಾರರಿಗೆ ವಿತರಿಸಲಾಗಿದೆ. ಅವುಗಳಲ್ಲಿ 4,50,158 ಗಣಕೀಕರಣಗೊಂಡ ಗಣತಿ ನಮೂನೆಗಳಿವೆ. ಎಂದು ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ತಿಳಿಸಿದ್ದಾರೆ.16 ಜೂನ್ 2025ರ ಮತದಾರರ ಪಟ್ಟಿಯಂತೆ ಜಿಲ್ಲೆಯಲ್ಲಿ ಒಟ್ಟು 19,82,114 ಮತದಾರರು ದಾಖಲಾಗಿದ್ದಾರೆ. ಇವರಿಗೆ ಮನೆ ಮನೆಗೆ ತೆರಳಿ ಗಣತಿ ನಮೂನೆಗಳನ್ನು ವಿತರಿಸಿ, ಅಗತ್ಯ ಮಾಹಿತಿಯನ್ನು ಸಂಗ್ರಹಿಸುವ ಕಾರ್ಯ ನಡೆಯುತ್ತಿದೆ ಎಂದವರು ತಿಳಿಸಿದ್ದಾರೆ. ಗಣತಿ ನಮೂನೆಗಳ ವಿತರಣೆ ಮತ್ತು ಡಿಜಿಟಲೀಕರಣ ಕಾರ್ಯವು ಜೂನ್.30 ರಿಂದ ಜುಲೈ.29 ರವರೆಗೆ ನಡೆಯಲಿದ್ದು, ಈ ಅವಧಿಯಲ್ಲಿ ಮತದಾರರು ತಮ್ಮ ವಿವರಗಳನ್ನು ಪರಿಶೀಲಿಸಿ ಅಗತ್ಯ ದಾಖಲೆಗಳೊಂದಿಗೆ ನಮೂನೆಗಳನ್ನು ಸಲ್ಲಿಸಬಹುದಾಗಿದೆ.

1,528 ಮತದಾರರು ಆನ್ ಲೈನ್ ಮೂಲಕ ಗಣತಿ ನಮೂನೆಗಳನ್ನು ಸಲ್ಲಿಸಿದ್ದಾರೆ. 2,141 ಮತದಾರರು ಶಾಶ್ವತವಾಗಿ ಸ್ಥಳಾಂತರಗೊಂಡಿದ್ದಾರೆ. 3,276 ಮತದಾರರು ಮೃತಪಟ್ಟಿದ್ದಾರೆ. 824 ಮತದಾರರು ಈಗಾಗಲೇ ನೋಂದಾಯಿಸಿಕೊಂಡಿರುವುದು ಪರಿಶೀಲನೆಯಲ್ಲಿ ಕಂಡುಬಂದಿದೆ ಎಂದವರು ಸಂಗ್ರಹಿಸಲಾಗದ ಅಥವಾ ಗೈರುಹಾಜರಾಗಿರುವ ಮತದಾರರ 55 ಹಾಗೂ 44 ಇತರೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಉಪ ನೋಂದಣಿ ಕಚೇರಿಗಳು ಕಾರ್ಯನಿರ್ವಹಣೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯ ಜಿಲ್ಲಾ ನೋಂದಣಾಧಿಕಾರಿಗಳ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲೆಯ ಎಲ್ಲಾ ಉಪ ನೋಂದಣಿ ಕಚೇರಿಗಳು ಜುಲೈ 12 ರಂದು (ಭಾನುವಾರ) ಎಂದಿನಂತೆ ಕಾರ್ಯನಿರ್ವಹಿಸಲಿವೆ.

ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರು, ಬೆಂಗಳೂರು ಅವರ ನಿರ್ದೇಶನದಂತೆ ಭಾನುವಾರವೂ ನೋಂದಣಿ ಸೇವೆಗಳನ್ನು ಸಾರ್ವಜನಿಕರಿಗೆ ಒದಗಿಸಲು ಸೂಚನೆ ನೀಡಲಾಗಿದೆ. ಈ ಹಿನ್ನೆಲೆಯಲ್ಲಿ ವಿಜಯಪುರ ಜಿಲ್ಲೆಯ ಹಿರಿಯ ಉಪ ನೋಂದಣಿ ಕಚೇರಿ, ವಿಜಯಪುರ, ಉಪ ನೋಂದಣಿ ಕಚೇರಿ ಬಸವನ ಬಾಗೇವಾಡಿ, ಉಪ ನೋಂದಣಿ ಕಚೇರಿ ಇಂಡಿ, ಉಪ ನೋಂದಣಿ ಕಚೇರಿ ಸಿಂದಗಿ, ಉಪ ನೋಂದಣಿ ಕಚೇರಿ ಮುದ್ದೇಬಿಹಾಳ ಹಾಗೂ ಉಪ ನೋಂದಣಿ ಕಚೇರಿ ತಿಕೋಟಾ ಜುಲೈ 12ರಂದು ಎಂದಿನಂತೆ ಕಾರ್ಯನಿರ್ವಹಿಸಲಿವೆ.

ಆದ್ದರಿಂದ ಸಾರ್ವಜನಿಕರು ಈ ಅವಕಾಶದ ಸದುಪಯೋಗ ಪಡೆದು ತಮ್ಮ ನೋಂದಣಿ ಸಂಬಂಧಿತ ಕೆಲಸಗಳನ್ನು ಸಂಬಂಧಿತ ಉಪ ನೋಂದಣಿ ಕಚೇರಿಗಳಲ್ಲಿ ನಿರ್ವಹಿಸಿಕೊಳ್ಳುವಂತೆ ಜಿಲ್ಲಾ ನೋಂದಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಐಆರ್‌ಗೆ ಸಹಾಯವಾಣಿ ಕೇಂದ್ರ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಗೆ ಸಂಬಂಧಿಸಿದಂತೆ ಮತದಾರರಿಗೆ ಗಣತಿ ನಮೂನೆಗಳನ್ನು ಭರ್ತಿ ಮಾಡುವ ಅನುಕೂಲಕ್ಕಾಗಿ ಪ್ರತಿ ವಾರ್ಡ್ ನಲ್ಲಿ ಮತದಾರರ ಸಹಾಯವಾಣಿ ಕೇಂದ್ರ ಸ್ಥಾಪಿಸಲಾಗಿದೆ ಎಂದು ಮಹಾನಗರ ಪಾಲಿಕೆ ಆಯುಕ್ತರಾದ ವಿಜಯ ಮೆಕ್ಕಳಕಿ ಅವರು ತಿಳಿಸಿದ್ದಾರೆ. ಮಹಾನಗರ ಪಾಲಿಕೆಯ ಘನತ್ಯಾಜ್ಯ ವಾಹನಗಳಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಸಾರ್ವಜನಿಕರಿಗೆ ಧ್ವನಿ ಮುದ್ರಣ ಮೂಲಕ ಪ್ರಚಾರ ಮಾಡಲಾಗುತ್ತಿದೆ. ವಿಜಯಪುರ ನಗರ ಪ್ರದೇಶದಲ್ಲಿ ಈ ಮೊದಲು ವಾಸವಿದ್ದ ಸ್ಥಳದ ಮತದಾರ ಪಟ್ಟಿಯಲ್ಲಿ ಹೆಸರು ದಾಖಲೆಯಿದ್ದು, ಹೊಸ ಬಡಾವಣೆಗೆ ಸ್ಥಳಾಂತರಗೊಂಡ ಮತದಾರರು ಈ ಹಿಂದೆ ವಾಸವಿದ್ದ ಭಾಗದ ಮತದಾರರ ಪಟ್ಟಿಯಲ್ಲಿ ವಿಳಾಸವನ್ನು ಬದಲಾಯಿಸದೆ ಇರುವುದು ಕಂಡುಬಂದಿರುತ್ತದೆ. ಆದ್ದರಿಂದ ತಮ್ಮ ಮನೆಗಳಿಗೆ ಗಣತಿ ನಮೂನೆಗಳು ತಲುಪದೇ ಇದ್ದಲ್ಲಿ ಸಂಬಂಧಪಟ್ಟ ವಾರ್ಡನಲ್ಲಿ ಸ್ಥಾಪಿಸಲಾಗಿರುವ ಮತದಾರರ ಸಹಾಯ ಕೇಂದ್ರ ಕ್ಕೆ ಭೇಟಿ ನೀಡಬಹುದಾಗಿದೆ.



ಇಲ್ಲವೇ ಪಾಲಿಕೆ ಚುನಾವಣಾ ವಿಭಾಗದ ಮತದಾರರ ಸಹಾಯ ವಾಣಿ ಸಂಖ್ಯೆ : 08352-200425 ಕರೆ ಮಾಡಿ ತಮ್ಮ ಮತದಾರ ಗುರುತಿನ ಚೀಟಿ ಸಂಖ್ಯೆ ಹೇಳಿದರೆ ಸಂಬಂದಪಟ್ಟ ಮತಗಟ್ಟೆ ಮಟ್ಟದ ಅಧಿಕಾರಿಗಳಿಗೆ ಗಣತಿ ನಮೂನೆಗಳನ್ನು ವಿತರಿಸಲು ಕ್ರಮವಹಿಸಲಾಗುವದು ಎಂದು ಮಹಾನಗರ ಪಾಲಿಕೆ ಆಯುಕ್ತರ ಪ್ರಕಟಣೆ ತಿಳಿಸಿದೆ.

# ಘಟನೆ ಮತ್ತು ಪ್ರತಿಕ್ರಿಯೆಯ ನಡುವಿನ ಆ ಕ್ಷಣ..

■ ಉದಯರಶ್ಮಿ ದಿನಪತ್ರಿಕೆ

ಮನುಷ್ಯನ ಜೀವನವನ್ನು ರೂಪಿಸುವುದು ಘಟನೆಗಳಲ್ಲ. ಅವುಗಳಿಗೆ ಅವನು ನೀಡುವ ಪ್ರತಿಕ್ರಿಯೆಗಳು.

ಯಾವುದೇ ಘಟನೆ ನಡೆದ ಕ್ಷಣ ಮತ್ತು ಅದಕ್ಕೆ ನಾವು ಪ್ರತಿಕ್ರಿಯಿಸುವ ಕ್ಷಣದ ನಡುವೆ ಒಂದು ಸೂಕ್ಷ್ಮ ವಿರಾಮವಿರುತ್ತದೆ. ಅದು ಕಣ್ಣಿಗೆ ಕಾಣದಷ್ಟು ಚಿಕ್ಕದಾಗಿರಬಹುದು. ಆದರೆ ಬದುಕಿನ ಅತಿ ದೊಡ್ಡ ರಹಸ್ಯ ಅಡಗಿರುವುದು ಅಲ್ಲಿಯೇ.

ಮಳೆ ಬೀಳುವುದು ನಮ್ಮ ಕೈಯಲ್ಲಿಲ್ಲ. ಆದರೆ ಛತ್ರಿ ಹಿಡಿಯಬೇಕೋ, ಮಳೆಯನ್ನು ಆಸ್ವಾದಿಸಬೇಕೋ, ಅಥವಾ ಮಳೆಯನ್ನು ದೂಷಿಸುತ್ತಾ ನಿಲ್ಲಬೇಕೋ ಎಂಬುದು ನಮ್ಮ ಆಯ್ಕೆ. ಇದೇ ರೀತಿ ಜೀವನದಲ್ಲಿಯೂ ಅನೇಕ ಘಟನೆಗಳು ನಮ್ಮ ಅನುಮತಿಯಿಲ್ಲದೆ ಸಂಭವಿಸುತ್ತವೆ. ಆದರೆ ಅವುಗಳ ಮುಂದೆ ನಾವು ಹೇಗೆ ನಿಲ್ಲುತ್ತೇವೆ ಎಂಬುದೇ ನಮ್ಮ ವ್ಯಕ್ತಿತ್ವವನ್ನು ನಿರ್ಧರಿಸುತ್ತದೆ.

ಆ ಒಂದು ಕ್ಷಣ ಕೋಪವನ್ನು ತಾಳ್ಮೆಯಾಗಿ ಪರಿವರ್ತಿಸಬಹುದು. ದ್ವೇಷವನ್ನು ಕರುಣೆಯಾಗಿ ಬದಲಿಸಬಹುದು. ಪ್ರತೀಕಾರವನ್ನು ಕ್ಷಮೆಯಾಗಿ ರೂಪಿಸಬಹುದು. ಭಯವನ್ನು ಧೈರ್ಯವಾಗಿ ಪರಿವರ್ತಿಸಬಹುದು. ಆತುರವನ್ನು ವಿವೇಕವನ್ನಾಗಿ ಮಾಡಬಹುದು.

ಆ ಕ್ಷಣವನ್ನು ಕಳೆದುಕೊಂಡರೆ ಭಾವನೆಗಳು ನಮ್ಮನ್ನು ಮೀರುತ್ತವೆ ಎಂಬುದು ನನ್ನ ಅಭಿಪ್ರಾಯ. ಆದರೆ ಆ ಕ್ಷಣವನ್ನು ಅರಿತು ಬಳಸಿದರೆ ವಿವೇಕ ನಮ್ಮನ್ನು ಮುನ್ನಡೆಸುತ್ತದೆ. ಇದೇ ಆತ್ಮನಿಗ್ರಹ. ಇದೇ ಪ್ರಬುದ್ಧತೆ.

ಜೀವನದ ಅನೇಕ ವಿಷಾದಗಳಿಗೆ ಕಾರಣ ಘಟನೆಗಳಲ್ಲ. ಯೋಚನೆ ಇಲ್ಲದೆ ನೀಡಿದ ಪ್ರತಿಕ್ರಿಯೆಗಳು. ಒಂದು ಮಾತು ಸಂಬಂಧವನ್ನು ಮುರಿಯಬಹುದು. ಅದೇ ಒಂದು ಕ್ಷಣದ ಮೌನ ಸಂಬಂಧವನ್ನು ಉಳಿಸಬಹುದು. ಒಂದು ಆತುರದ ನಿರ್ಧಾರ ವರ್ಷಗಳ ಪಶ್ಚಾತ್ತಾಪಕ್ಕೆ ಕಾರಣವಾಗಬಹುದು. ಅದೇ ಒಂದು ಕ್ಷಣದ ತಾಳ್ಮೆ ಬದುಕಿನ ದಿಕ್ಕನ್ನೇ ಬದಲಿಸಬಹುದು.

ಅಂದು ಸಿಯಾ ಒಂದು ಕ್ಷಣ ಆತುರ ಪಡದಿದ್ದರೆ ಇಂದು ಕೇತನ್ ಬದುಕಿರುತ್ತಿದ್ದ. ಸಿಯಾಳ ಬದುಕು ಜೈಲಿನ ಭಯದ ನೆರಳಲ್ಲಿ ಇರುತ್ತಿರಲಿಲ್ಲ.

ಆ ಹದಿಮೂರು ವರ್ಷದ ಹೆಣ್ಣು ಮಗುವಲ್ಲಿ ತನ್ನ ಮಗುವನ್ನು ಆ ಆಟೋ ಡ್ರೈವರ್ ಕಂಡಿದ್ದರೆ ಆ ಮಗುವಿನ ಭವಿಷ್ಯ ಉಳಿಯುತ್ತಿತ್ತು




ಮತ್ತೂ ಈ ದುರುಳನ ಜೀವನವೂ ಕೂಡಾ ಕ್ಷೇಮವಾಗಿರುತ್ತಿತ್ತು.

ಆದ್ದರಿಂದ ಪ್ರತಿಯೊಂದು ಸಂದರ್ಭದಲ್ಲೂ ನಮ್ಮನ್ನು ನಾವು ಕೇಳಿಕೊಳ್ಳಬೇಕು "ಈ ನನ್ನ ಪ್ರತಿಕ್ರಿಯೆ ನನ್ನ ಜೀವನದ ದಿಕ್ಕನ್ನು ಬದಲಿಸುತ್ತಿದೆಯೇ ಅಥವಾ ನನ್ನ ವಿವೇಕವನ್ನು ಮುಚ್ಚಿಡುತ್ತಿದೆಯೇ" ಎಂದು.


## ರಾಜನುಡಿ

ಆ ಪ್ರಶ್ನೆಗೆ ಸಿಗುವ ಉತ್ತರವೇ ನಮ್ಮ ಭವಿಷ್ಯವನ್ನು ರೂಪಿಸುತ್ತದೆ.





ಜೀವನದ ನಿಜವಾದ ಸ್ವಾತಂತ್ರ್ಯ ಯಾವುದೇ ಪರಿಸ್ಥಿತಿಯಲ್ಲೂ ಘಟನೆ ಘಟಿಸಿದ ನಂತರ ನಮ್ಮ ಪ್ರತಿಕ್ರಿಯೆಯನ್ನು ಆಯ್ಕೆ ಮಾಡುವ ಸಾಮರ್ಥ್ಯ.

ಹೀಗಾಗಿ ಘಟನೆ ಮತ್ತು ಪ್ರತಿಕ್ರಿಯೆಯ ನಡುವಿನ ಆ ಸಣ್ಣ ವಿರಾಮವನ್ನು ಗೌರವಿಸಿ. ಏಕೆಂದರೆ ಅದೇ ವಿರಾಮದಲ್ಲಿ ನಿಮ್ಮ ವ್ಯಕ್ತಿತ್ವ ಹುಟ್ಟುತ್ತದೆ. ನಿಮ್ಮ ಸಂಬಂಧಗಳು ಉಳಿಯುತ್ತವೆ. ನಿಮ್ಮ ಭವಿಷ್ಯ ರೂಪುಗೊಳ್ಳುತ್ತದೆ ಮತ್ತು ನಿಮ್ಮ ಜೀವನದ ನಿಜವಾದ ರಹಸ್ಯ ಅನಾವರಣಗೊಳ್ಳುತ್ತದೆ.



ಲೇಖನ
– ಡಾ. ರಾಜಶೇಖರ ನಾಗೂರ
ಸಂಚಾಲಕರು
'ನಮ್ಮ ಕಥಾ ಅರಮನೆ'




# ಕೈಯಲ್ಲಿ ಕುಣಿವ ಆ ಹೊನ್ನ ಬಳೆಯ ಘಲ್ ಘಲ್ ತಾಳಕೆ




■ ಉದಯರಶ್ಮಿ ದಿನಪತ್ರಿಕೆ

ಒಲವಿನ ರಾಧಾ

ನನ್ನ ಗೆಳೆಯರ ಬದುಕಿನಲ್ಲಿ ಆದ ದುಸ್ಥಿತಿಯನ್ನು ಕಂಡು ನನಗೆ ಪ್ರೀತಿ ಪ್ರೇಮ ಮದುವೆಯಲ್ಲಿ ಆಸಕ್ತಿಯೇ ಇರಲಿಲ್ಲ. ಅಪ್ಪ ಅವ್ವನಿಗೆ ಮೊಮ್ಮಕ್ಕಳನ್ನು ನೋಡಬೇಕೆಂಬ ಆಸೆ. ಪದೇ ಪದೇ ಅದೇ ವಿಷಯ ಕೇಳಬೇಡಿ ಎನ್ನುವ ನನ್ನ ನುಡಿಗಳಿಂದ ಅವ–ರಿಗೆ ಬೇಸರವಾಗಿತ್ತು. ಸಾಲದ್ದಕ್ಕೆ ನಾನು ಏಕೈಕ ಪುತ್ರ ಅಮ್ಮನ ಮುದ್ದಿನ ಮಗ.. ಪ್ರತಿಷ್ಠಿತ ಕಂಪನಿಯಲ್ಲಿ ಕೆಲಸ ಮಾಡುವ ನಿನಗೆ ಹೆಣ್ಣು ಕೊಡಲು ಮುಗಿಬಿದ್ದಿದ್ದಾರೆ ಎಂದು ಅವ್ವ ಹೇಳುವಾಗ ಅವರ ಕಣ್ತುಂಬಿ ಬರುತ್ತಿತ್ತು. ಆದರೂ ನನ್ನ ಕಲ್ಲು ಹೃದಯ ಕರಗಿರಲಿಲ್ಲ. ಎಲ್ಲರಿಗೂ ಅವರವರ ಭಾವನೆಗಳೇ ಹೆಚ್ಚು ಅವರವರ ಯೋಚನೆಗಳೇ ಸರಿ. ಹೀಗಿರುವಾಗ ನನ್ನ ಹೆತ್ತವರ ಭಾವನೆಗಳಿಗೆ ನಾನು ಬೆಲೆ ಕೊಡದಾಗಿದ್ದೆ. ಆನೆ ನಡೆದಿದ್ದೆ ದಾರಿ ಎಂಬಂತೆ ನನ್ನ ದಾರಿಯಲ್ಲಿ ನಡೆದಿದ್ದೆ. ಮನದಲ್ಲಿ ಸಣ್ಣ ತಲ್ಲಣವಿತ್ತು. ನಾ ನಡೆವ



ದಾರಿ ಅದೆಲ್ಲಿಗೆ ಕರೆದೊಯ್ಯುತ್ತದೆಯೋ ಎಂದು ಸಣ್ಣಗೆ ನಡುಕವು ಶುರುವಾಗಿತ್ತು..

ಅದೇ ಸಮಯದಲ್ಲಿ ನಮ್ಮ ಆಫೀಸಿಗೆ ಕಾಲಿಟ್ಟವಳು ನೀನು. ಅದೊಂದು ದಿನ ಯಾರೊಂದಿಗೋ ಫೋನಿನಲ್ಲಿ ಮಾತನಾಡುತ್ತ ಅತ್ತಿಂದಿತ್ತ ಇತ್ತಿಂದತ್ತ ಓಡಾಡುತ್ತಿದ್ದೆ. ಆ ಕಡೆಯವರ ಮಾತಿಗೆ ಸಿಟ್ಟಿಗೆದ್ದು ಕರೆ ತುಂಡರಿಸಿದೆ. ಅದೇ ಸಮಯಕ್ಕೆ ನಿನ್ನ ಆಗಮನವಾಯಿತು. ನಿನ್ನನ್ನು ಗಮನಿಸದ ನಾನು ನಿನಗೆ ಢಿಕ್ಕಿ ಹೊಡೆದಿದ್ದೆ. ನಿನ್ನ ಭುಜಕ್ಕೆ ನನ್ನ ಭುಜ ತಾಗಿತ್ತು. ಹಿಂದೆಂದೂ ಆಗಿರದ ಅನುಭವ ಅಂದು ನನಗಾಗಿತ್ತು. ಗೊತ್ತಿಲ್ಲದಂತೆ ನನ್ನ ಹೃದಯ 'ಈ ಹುಡುಗಿಯನ್ನು ಬಿಡಬೇಡ ಪ್ರೀತಿಸು' ಎಂದು ಮೊದಲ ಸಲ ಪ್ರೀತಿಯಿಂದ ಪಿಸುಗುಟ್ಟಿತ್ತು. ಸಾವರಿಸಿಕೊಂಡು, 'ನನ್ನಿಂದ ತಪ್ಪಾಯಿತು' ಎಂದೆ. ನೀನು ಏನನ್ನೂ ಹೇಳದೇ ಮುಗಳ್ನಕ್ಕೆ. ಮೆತ್ತಗೆ ಕಣ್ಣಲ್ಲೇ ಸಮಾಧಾನಿಸಿದೆ. ನನಗೆ ಜೀವದಲ್ಲಿ ಜೀವ ಬಂದಂತಾಯಿತು. ಖುಷಿಮೊಗದಿಂದ ನನ್ನ ಕ್ಯಾಬಿನತ್ತ ಹೆಜ್ಜೆ ಹಾಕುತ್ತಿದೆ. ಆ ಮೌನದ ನಡುವೆ ತಣ್ಣಗೆ ಸೀಳಿಕೊಂಡು ಬಂದ ನಿನ್ನ ದನಿಯಲ್ಲಿ 'ಹಲೋ ಮಿಸ್ಟರ್ ನಿಮ್ಮ ನೇಮ್ ಎಂಬ ಪ್ರಶ್ನೆ ಬಂದಿತ್ತು. ತಡವರಿಸುತ್ತ ಕೃಷ್ಣ ಎಂದಿದ್ದೆ ನೋಟ ತಾಕಿಸದೆ. ಈ ಹಿಂದೆ ಹೀಗೆ ಯಾವ ಹೆಣ್ಣಿನೊಂದಿಗೆ ಮಾತನಾಡದೇ ಇರುವುದಕ್ಕೇನೋ ಹಣೆಯ ಮೇಲೆ ಬೆವರ ಹನಿಗಳು ಸಾಲುಗಟ್ಟಿದ್ದವು. ಮನದಲ್ಲಿ ಮೊದಲ ಸಲ ಪ್ರೀತಿಯ ಅಲೆಯೊಂದು ಮೂಡಿತ್ತು.

ಬರಬರುತ್ತ ಸ್ನೇಹ ಬೆಳೆಯಿತು. ನೀನು ರಜೆ ಹಾಕಿದರೆ ನನಗೆ ಆ ದಿನ ಒಂದು ಯುಗದಂತೆ ಭಾಸವಾಗುತ್ತಿತ್ತು. ಜೊತೆ ಇರುವಾಗ ದಿನ ಸರಿದಿದ್ದೇ ಗೊತ್ತಾಗುತ್ತಿರಲಿಲ್ಲ. ನನ್ನ ಹೃದಯದಲ್ಲಿ ಪ್ರೀತಿ ಮೊದಲೇ ಮೊಳಕೆ ಒಡೆದಿತ್ತು. ನಿನ್ನಲ್ಲಿ ಯಾವಾಗ ಪ್ರೀತಿ ಅಲೆ ಹೊಮ್ಮುತ್ತದೆಯೋ ಅಂತ ಕಾಯುತ್ತಿದ್ದೆ. 'ಈ ಹಿಂದಿನ ಹುಡುಗ ನೀನಲ್ಲ ನಿನಗೀಗ ಪ್ರೇಮಜ್ವರ ಏರುತ್ತಿದೆ.' 'ನೀನು ಅವಳನ್ನು ಪ್ರಾಣಕ್ಕಿಂತ ಹೆಚ್ಚು ಪ್ರೀತಿಸುತ್ತಿರುವೆ.' ಎಂದು ಮನಸ್ಸು ಕಾಲೆಳೆಯುತ್ತಿತ್ತು. ಲಂಚ್ ಸಮಯದಲ್ಲಿ ನೇರವಾಗಿ ಹೇಳಿದರಾಯಿತೆಂದು ಅದೆಷ್ಟೋ ಸಲ ನಿರ್ಧರಿಸಿದ್ದರೂ ಅದು ಸಾಧ್ಯವಾಗಿರಲಿಲ್ಲ. 'ನಿನ್ನಿಷ್ಟದ ತಿಂಡಿ ಹದವಾಗಿ ಸಕ್ಕರೆ ಬೆರೆಸಿ ನಿನಗಾಗಿ ನಾನೇ ಮಾಡಿ ತಂದಿರುವೆ.' ಎಂದು ಹೆಗಲ ಮೇಲೆ ಇಳಿಬಿದ್ದಿದ್ದ ರೇಷ್ಮೆ ಕೂದಲು ಹಿಂದಕ್ಕೆ ತಳ್ಳಿಕೊಂಡು, ಕಣ್ಮಿಟುಕಿಸುತ್ತ ನೀ ನುಡಿದಾಗಲೇ ಗೊತ್ತಾಗಿದ್ದು ನಿನ್ನ ಹೃದಯದಲ್ಲೂ ಪ್ರೀತಿಯ ನದಿಯು ಹರಿಯುತಿದೆ ಎಂದು.

ಅಂದು ಆಫೀಸ್‌ನಲ್ಲಿ ಹಿರಿಯ ಸಹೋದ್ಯೋಗಿ ಒಬ್ಬರ ನಿವೃತ್ತಿ ಫಂಕ್ಷನ್ ಗಂಟೆ ಒಂಭತ್ತಾಗಿತ್ತು. ಇನ್ನೂ ಯಾರೂ ಬಂದಿರಲಿಲ್ಲ. ಆಫೀಸಿಗೆ ಸಮಯಕ್ಕೆ ಮುಂಚೆ ಬರುವ ರೂಢಿ ನನ್ನಂತೆ ನಿನಗೂ ಇತ್ತು. ಅಚ್ಚ ಕೆಂಪಿನ ಸೆಲ್ವಾರ್, ತುಟಿಗೆ ತಿಳಿಗುಲಾಬಿ ಲಿಪ್‌ಸ್ಟಿಕ್, ಸೆಲ್ವಾರ್ ಕಲರ್‌ಗೆ ಹೊಂದುವಂತಹ ಕಿವಿಯೋಲೆ, ಕಣ್ಣಿಗೆ ಗಾಢವಾಗಿ ಹಚ್ಚಿದ ಕಾಡಿಗೆ, ನೀಳ ಕುತ್ತಿಗೆಗೆ ಒಪ್ಪುವ ಚಿಕ್ಕ ಡೈಮಂಡ್ ಇರುವ ತಿಳುವಾದ ಚೈನ್, ಲೂಸ್ ಬಿಟ್ಟ ಕಪ್ಪಾದ ಕೂದಲು, ತೇಟ್ ಗೊಂಬೆ ತರ ಕಾಣುತ್ತಿದ್ದೆ. ಮೊದಲೇ ಮುದ್ದು ಮುಖದ ಸುಂದರಿ ಒಂದು ಚೆಂದದ ನಗು ಬಿಸಾಕುತ್ತ ಓಡುವ ನಡಿಗೆಯಲ್ಲಿ ನನ್ನತ್ತ ಬಂದು ಸುತ್ತಲೂ ಒಮ್ಮೆ ಕಣ್ಣಾಡಿಸಿದೆ. ನೀನು ಸನಿಹ ಬಂದಾಗ ಏಕೋ ಹೃದಯ ಒಂದೇ ಸಮನೆ ಬಡಿದುಕೊಳ್ಳಲಾರಂಭಿಸಿತ್ತು.

ಅದೇ ಸಮಯದಲ್ಲಿ ಮೆಲ್ಲನೆ ಕೈ ಹಿಡಿದೆ. ಆ ಕ್ಷಣ ಅದೇನೋ ಅರಿಯದ ಭಾವವೊಂದು ಮೂಡಿತು. ನಿನ್ನನ್ನೇ ನೋಡುತ್ತ ನಿಂತುಬಿಟ್ಟೆ. ಮಮತೆಯಿಂದ ನನ್ನ ತಲೆ ನೇವರಿಸಿದೆ ಕೆನ್ನೆ ಹಿಂಡಿದೆ. ಮೊಗವನ್ನು ಬೊಗಸೆಯಲ್ಲಿ ಹಿಡಿದು ಹಣೆಗೆ ಅಕ್ಕರೆಯಿಂದ ನಿನ್ನ ಕೆಂದುಟಿಗಳಿಂದ ಮುದ್ರಿಸಿದೆ. ನನಗೇ ಅರಿವಾಗದಂತೆ ನಾನೂ ನಿನ್ನ ಕೆನ್ನೆ ಕೆಂಪಾಗಿಸಿದ್ದೆ. ಮೆಲ್ಲನೇ ನನ್ನ ತೋಳಿನಿಂದ ಬಿಡಿಸಿಕೊಂಡು ಯಾರಿಗೂ ಗೊತ್ತಾಗಬಾರದೆಂದು ಸರಸರನೆ ಮೆಟ್ಟಿಲುಗಳನ್ನು ಇಳಿದು ಕೆಳಗೆ ಹೋದೆ. ಆಗ ಮನಸ್ಸು ಎಷ್ಟು ಚೂಟಿ ಇವಳು ಎಂದಿತ್ತು. ಆ ಕ್ಷಣದಲ್ಲಿ ನನ್ನೆದೆ ಬಡಿತ ಏರು ಪೇರಾಗಿದ್ದು ಸುಳ್ಳಲ್ಲ. ಏನೋ ಒಂದು ತರ ರೋಮಾಂಚನವಾಯಿತು. ಸಹೋದ್ಯೋಗಿಯೊಬ್ಬರು ಹಲೋ ಕೃಷ್ಣ ಎಂದು ಕೂಗಿದಾಗಲೇ ವಾಸ್ತವಕ್ಕೆ ಮರಳಿದ್ದೆ.

ಆಫೀಸಿನಲ್ಲಿ ನಿನ್ನ ಗಮನ ಸೆಳೆಯಲು ಬೇಕೆಂದೇ ಎರಡು



ಬಾರಿ ಕೆಮ್ಮುತ್ತಿದ್ದೆ. ಆಗಾಗ ನನ್ನ ನಿನ್ನ ನಡುವೆ ಪಾರ್ಕಿನಲ್ಲಿ ಕೋಳಿ ಜಗಳ ಇರುತ್ತಿತ್ತು. ಆಗೆಲ್ಲ ಸಮಾಧಾನಿಸಲು ನೋಡಿದಾಗ ಮೂಕವ್ರತದಿಸಿಕೊಂಡು ಕೂಡುತ್ತಿದ್ದೆ. 'ಸ್ಸಾರಿ ಪ್ರಿನ್ಸಸ್' ಎಂದು ಕ್ಷಮೆ ಕೇಳಿ ರಮಿಸುತ್ತಿದ್ದೆ. ಕೊನೆಗೆ ನೀನು ತೋರಿಕೆಯ ಮುನಿಸಿನಲ್ಲಿ ರೇಗಿಸುತ್ತ ಮುದ್ದಾಗಿ ನಕ್ಕು ಬಿಡುತ್ತಿದ್ದೆ. ನಾನು ಫುಲ್ ಫಿದಾ ಆಗಿ ಹಿಂದಿನಿಂದ ಬಾಚಿ ತಬ್ಬುತ್ತಿದ್ದೆ. ಆ ತಬ್ಬುವಿಕೆಯಲ್ಲಿ ವಿವರಿಸಲಾಗದ ಹಿತವಿತ್ತು. ಇನ್ನು ನೀನು ಮೂರು ಹೊತ್ತು ನನ್ನೊಂದಿಗೆ ಹೀಗೆಯೇ ಇರಬೇಕು. ನಿನ್ನನ್ನೇ ಪ್ರಪಂಚವಾಗಿಸಿಕೊಳ್ಳಬೇಕು ಅನ್ನೋದು ನನ್ನಾಸೆ ಎಂದು



ಕಣ್ಣು ಹೊಡೆಯುತ್ತ ನಿನ್ನನ್ನು ಚೇಡಿಸುತ್ತಿದ್ದೆ. ಆಗೆಲ್ಲ ನೀನು ಸಂಕೋಚದ ಮುದ್ದೆಯಾಗುತ್ತಿದ್ದೆ. ಆಗಾಗ ನಿನ್ನ ಕಾಲೆಳೆಯುವುದು ನನಗೆ ಖುಷಿ ನೀಡುತ್ತಿತ್ತು. ಜಗತ್ತಿನಲ್ಲಿ ಬರಿ ಮೋಸ ಮಾಡುವವರಿಲ್ಲ. ಪ್ರೀತಿಯ ಬುತ್ತಿಯನ್ನು ಹಂಚುವವರು ಇದ್ದಾರೆ ಎಂಬುದು ನಿನ್ನನ್ನು ಭೇಟಿಯಾದ ಮೇಲೆ ನನಗೆ ತಿಳಿದಿತ್ತು.

ಅಮ್ಮನಿಗೆ ನನ್ನಲ್ಲಿ ಆದ ಬದಲಾವಣೆ ತಿಳಿದುಕೊಳ್ಳಲು ಬಹಳ ದಿನ ಹಿಡಿಯಲಿಲ್ಲ. ನಿನ್ನ ಬಗ್ಗೆ ತಿಳಿದಾಗಿನಿಂದ ದಿನವೂ ಹೊಸ ಹೊಸ ರುಚಿ ಅಮ್ಮನ ಕೈಯಿಂದ ತಯಾರಾಗುತ್ತಿತ್ತು. ನೀನೇ ತಿಂದು ಬಿಡಬೇಡ. ನನ್ನ ಮುದ್ದು ಸೊಸೆಗೆ ತಿನ್ನಿಸು ಎಂದು ತಾಕೀತು ಮಾಡುತ್ತಿದ್ದಳು. ನನ್ನಮ್ಮ ನೀಡಿದ್ದ ಬಳೆಗಳನ್ನು ನಾನೇ ನಿನ್ನ ಕೈಗೆ ತೊಡೆಸಿದ್ದೆ. ಆಗ ನನಗಾದ ಖುಷಿಗೆ ಪಾರವೇ ಇರಲಿಲ್ಲ. ಅಂದು ಅಂದದ ಕೈಗೆ ಚೆಂದದ ಘಲ್ ಘಲ್ ಸದ್ದಿನ ಬಳೆಗಳು ನನ್ನನ್ನು ನಿನ್ನತ್ತ ಇನ್ನಿಲ್ಲದಂತೆ ಸೆಳೆಯುತ್ತಿದ್ದವು. ಆ ಬಳೆಗಳೊಂದಿಗೆ ಎಷ್ಟೋ ಹೊತ್ತು ಆಡುತ್ತಲೇ ಇದ್ದೆ. ಅದರಲ್ಲಿ ನಿನ್ನ ನವಿರಾದ ಕೈ ಸ್ಪರ್ಷಿಸುವ ಅವಕಾಶವೂ ನನಗೆ ಸಿಕ್ಕಿತ್ತು. ಯಾವ ಜನುಮದ ಅನುಬಂಧವೋ ಏನೋ ಮದುವೆ ಬೇಡ ಎನ್ನುತ್ತಿದ್ದವನು ನಿನ್ನ ಪ್ರೀತಿಯಲ್ಲಿ ಸಿಲುಕಿದೆ. ಮೂರು ಗಂಟಿನ ನಂಟಿನಲ್ಲಿ ಒಂದಾಗಿರುವೆವು. 'ಕೈಯಲ್ಲಿ ಕುಣಿಯುವ ಆ ಹೊನ್ನ ಬಳೆಯ ಘಲ್ ಘಲ್ ತಾಳಕೆ ಪ್ರತಿ ರಾತ್ರಿ ಸರಸ ಸಲ್ಲಾಪದ ಎದೆಯ ತಂನಂ ಸೇರಿಸೋಣ.' ಅಪ್ಪ ಅವ್ವನ ಆಸೆಯಂತೆ ವರುಷದೊಳಗಡೆ ಕೈಗೆ ಮೊಮ್ಮಗು ನೀಡೋಣ. ಸತಾಯಿಸದೇ ಬೇಗ ಬಂದು ಬಿಡು ರಾಧಾ ಸರಸದ ಮಂಚಕೆ..

ಇಂತಿ ನಿನ್ನ ಕೃಷ್ಣ

ಲೇಖನ
– ಜಯಶ್ರೀ.ಜೆ. ಅಬ್ಬಿಗೇರಿ
ಇಂಗ್ಲೀಷ್ ಉಪನ್ಯಾಸಕರು
ಬೆಳಗಾವಿ
ಮೊ: 944923412





## ಶೈಕ್ಷಣಿಕ ಸಾಹಿತ್ಯ ಸಮ್ಮೇಳನ ಸರ್ವಾಧ್ಯಕ್ಷರಾಗಿ ವಿಜಯಕುಮಾರ ಪಾಟೀಲ

ಬೀದರ್:ಕನ್ನಡ ಸಾಹಿತ್ಯ ಪರಿಷಟನ ಬೀದರ್ ಉತ್ತರ ಪ್ರಥಮ ಶೈಕ್ಷಣಿಕ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ನಗರದ ಕನ್ನಿಕಾ ಪರಮೇಶ್ವರಿ ಪ್ರೌಢಶಾಲೆಯ ಮುಖ್ಯಶಿಕ್ಷಕ ವಿಜಯಕುಮಾರ ಪಾಟೀಲ ಯರನಳ್ಳಿ ಅವರನ್ನು ಆಯ್ಕೆ ಮಾಡಲಾಗಿದೆ.

ನಗರದ ಜಿಲ್ಲಾ ಕನ್ನಡ ಭವನದಲ್ಲಿ ಬುಧವಾರ ನಡೆದ ಕನ್ನಡ ಸಾಹಿತ್ಯ ಪರಿಷಟನ ಬೀದರ್ ಉತ್ತರ ಘಟಕದ ಕಾರ್ಯಕಾರಿಣಿ ಸಭೆಯಲ್ಲಿ ಸರ್ವ ಸಮ್ಮತಿಯಿಂದ ಈ ಆಯ್ಕೆ ಜರುಗಿತು. ವಿಜಯಕುಮಾರ ಪಾಟೀಲ ಅವರು 22 ವರ್ಷಗಳಿಂದ ಶೈಕ್ಷಣಿಕ ಸಾಹಿತ್ಯ ಕ್ಷೇತ್ರಕ್ಕೆ ನೀಡಿದ ಕೊಡುಗೆಯನ್ನು ಪರಿಗಣಿಸಿ ಅವರನ್ನು ಸರ್ವಾಧ್ಯಕ್ಷರಾಗಿ ಆಯ್ಕೆ ಮಾಡಲಾಗಿದೆ ಎಂದು ಪರಿಷಟನ ಬೀದರ್ ಉತ್ತರ ಘಟಕದ ಅಧ್ಯಕ್ಷ ಪರಮೇಶ್ವರ್ ಬಿರಾದಾರ ತಿಳಿಸಿದರು. ಸಮ್ಮೇಳನ ಆಗಸ್ಟ್ 8 ರಂದು ನಗರದ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗ ಮಂದಿರದಲ್ಲಿ ನಡೆಯಲಿದೆ ಎಂದು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಸುರೇಶ ಚನಶೆಟ್ಟಿ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಪ್ರಮುಖರಾದ ಲಕ್ಷ್ಮಣ ಪೂಜಾರಿ, ಸಂತೋಷ್ ಮಂಗಳೂರೆ, ಬಳಿರಾಮ ಕುರನಾಳೆ, ಸಂತೋಷ್ ಸೋಲಪುರೆ, ಸಂಗಮೇಶ ನೇಳಗೆ, ಬಸವರಾಜ ಬಿರಾದಾರ, ನರಸಾರೆಡ್ಡಿ ಮತ್ತಿತರರು ಇದ್ದರು.

## ಎಸ್‌ಐಆರ್; ಬಿಎಲ್‌ಒಗಳಿಗೆ ಒತ್ತಡ ಹಾಕದಂತೆ ಶಿಕ್ಷಕರ ಸಂಘ ಮನವಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯದಲ್ಲಿಬಿಎಲ್‌ಒಗಳಾಗಿ ಕರ್ತವ್ಯ ನಿರ್ವಹಿಸುವ ಶಿಕ್ಷಕರು ಹಾಗೂ ಇತರೆ ಇಲಾಖೆ ನೌಕರರ ಮೇಲೆ ಈ ಕಾರ್ಯ ಪ್ರಾರಂಭದ ಒಂದು ವಾರದಲ್ಲಿ ಎಲ್ಲ ಮತದಾರ ನಮೂನೆಗಳನ್ನು ವಿತರಣೆ ಮಾಡಲು ಒತ್ತಡ ಹಾಕುತ್ತಿರುವುದು ವಿಷಾದನಿಯ ಎಂದು ಜಿಲ್ಲಾ ಶಿಕ್ಷಕರ ಸಂಘದ ಅಧ್ಯಕ್ಷ ಅರ್ಜುನ ಲಮಾಣಿ ನೇತೃತ್ವದಲ್ಲಿ ಅಪರಜಿಲ್ಲಾಧಿಕಾರಿ ಡಾ.ಔದ್ರಾಮ ಅವರಿಗೆ ಶುಕ್ರವಾರ ಮನವಿ ಸಲ್ಲಿಸಿದರು.

ಮನವಿ ಸಲ್ಲಿಸಿ ಮಾತನಾಡಿದ ಜಿಲ್ಲಾಧ್ಯಕ್ಷ ಅರ್ಜುನ ಲಮಾಣಿ ಇಷ್ಟು ಕಡಿಮೆ ಸಮಯದಲ್ಲಿ ಈ ಕಾರ್ಯ ಪರಿಪೂರ್ಣವಾಗಲು ಸಾಧ್ಯವಿಲ್ಲ. ಏಕೆಂದರೆ ಒಂದು ಕುಟುಂಬದ ಸದಸ್ಯರು ಒಂದೇ ಮತದಾರರ ಪಟ್ಟಿಯಲ್ಲಿ ಹತ್ತು ಹಲವು ಕಡೆ ಹಂಚಿಹೋಗಿರುತ್ತಾರೆ. ಅವುಗಳನ್ನು ಒಂದು ಗೂಡಿಸಿ ಪ್ರತಿ ಮನೆಗೆ ಹಂಚಿಕೆ ಮಾಡಬೇಕಾಗಿರುತ್ತದೆ. ಈ ಪ್ರಕ್ರೀಯೆ ಅಷ್ಟೊಂದು ಬೇಗ ಪೂರ್ಣಗೊಳ್ಳುವದಿಲ್ಲ. ಹಲವು ಮತದಾರರು ಸರಳವಾಗಿ ದೊರೆಯುವದಿಲ್ಲ. ಒಟ್ಟು ಒಂದು ತಿಂಗಳ ಸಮಯವಿದ್ದು ಆ ಸಮಯದಲ್ಲಿ ಈ ಎಲ್ಲ ಕಾರ್ಯವನ್ನು ಶಕ್ತಿಮೀರಿ ಮಾಡಿ ಬಿಎಲ್‌ಒಗಳು ಪೂರ್ಣಗೊಳಿಸುತ್ತಾರೆ. ಒತ್ತಡಹಾಕುವದರಿಂದ ಬಿಎಲ್‌ಒಗಳಲ್ಲಿ ಹಾಗೂ ಸಾರ್ವಜನಿಕರಲ್ಲಿ ಗೊಂದಲ ಉಂಟಾಗುವ ಸಾಧ್ಯತೆ ಹೆಚ್ಚಾಗಿರುತ್ತದೆ. ವಿನಾಕಾರಣ ಒತ್ತಡ ಹಾಕದಿರಲು ಸಂಬಂಧಿಸಿದವರಿಗೆ ಸೂಚಿಸಬೇಕು ಎಂದರು.



ಒಂದು ಮತಗಟ್ಟೆಗೆ ಮತದಾರರ ಪಟ್ಟಿಯಲ್ಲಿ 800ಕ್ಕೂ ಹೆಚ್ಚು ಮತದಾರರು ಇದ್ದರೆ ಇನ್ನೋರ್ವ ಬಿಎಲ್‌ಒ ನೇಮಕಮಾಡಿ ಪ್ರತ್ಯೇಕ ಮತಗಟ್ಟೆ ಮಾಡಬೇಕು ಹಾಗೂ ಈಗಾಗಲೇ ಬಿಎಲ್‌ಒ ಕಾರ್ಯದಲ್ಲಿ ಭಾಗಶಃ ಶಿಕ್ಷಕರು ಕಾರ್ಯನಿರ್ವಹಿಸುತ್ತಿರುವ ಕಾರಣ ಜಿಲ್ಲೆಯ ಶಾಲೆಗಳ ಶಿಕ್ಷಣದ ಗುಣಮಟ್ಟ ಕುಸಿಯುವ ಸಂಭವ ಇರುತ್ತದೆ. ಕಾರಣ ಹೆಚ್ಚುವರಿ ಬಿಎಲ್‌ಒಗಳನ್ನು ಇತರೆ ಇಲಾಖೆಯಿಂದ ನೇಮಿಸಿಕೊಳ್ಳಬೇಕೆಂದು ಅಧಿಕಾರಿಗಳಿಗೆ ವಿನಂತಿಸಿದರು. ಮನವಿ ಸ್ವೀಕರಿಸಿ ಮಾತನಾಡಿದ ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ, ಎಸ್‌ಐಆರ್ ಈ ಕಾರ್ಯ ಸರ್ಕಾರದ ಮಹತ್ವದ ಕಾರ್ಯವಾಗಿದೆ. ಎಲ್ಲ ಸಿಬ್ಬಂದಿ ವರ್ಗ ಯಾವುದೇ ಒತ್ತಡಕ್ಕೆ ಒಳಗಾಗದೇ ನಿಮ್ಮ ಆರೋಗ್ಯವನ್ನು ಗಮನದಲ್ಲಿಟ್ಟುಕೊಂಡು ಆತಂಕಕ್ಕೆ ಒಳಗಾಗದೇ ಈ ಕಾರ್ಯವನ್ನು ಯಶಸ್ವಿಯಾಗಿ ನಿರ್ವಹಿಸಬೇಕು. ನಿಮಗ ಬೇಕಾಗುವ ಎಲ್ಲ ಸಹಕಾರವನ್ನು ಕೊಡಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಿಕ್ಷಕರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಣಮಂತ ಕೊಣದಿ, ನಗರವಲಯ ಅಧ್ಯಕ್ಷ ಜುಬೇರ ಎಸ್.ಕೆರೂರ, ಜಿಲ್ಲಾ ಉಪಾಧ್ಯಕ್ಷ ರುದ್ರಮ್ಮ ಗಿಡ್ಡಪ್ಪಗೋಳ, ಸಂಘಟನಾ ಕಾರ್ಯದರ್ಶಿ ಕಬೂಲ ಕೊಕಟನೂರ, ಎಲ್ಲ ತಾಲ್ಲೂಕ ಅಧ್ಯಕ್ಷರುಗಳಾದ ಅಶೋಕ ಚನಬಸಗೋಳ, ಮಲ್ಲಿಕಾರ್ಜುನ ಟಕ್ಕಳಕಿ, ಅಶೋಕ ಬೂದಿಹಾಳ, ಎಚ್.ಎಸ್.ಬಾರಿಕಾಯಿ, ಪಿ.ಸಿ.ತಳಕೇರಿ, ಬಿ.ಎಚ್.ಮುದನೂರ, ಬಿ.ಟಿ.ವಜ್ಜಲ, ಎಂ.ಎಸ್.ಚೌಧರಿ, ಪುಷ್ಪಾ ಗಚ್ಚಿನಮಠ, ಸಾಬು ಗಗನಮಾಲಿ, ಸಿದರಾಯ ಅಥಣಿ, ಪಿ.ಎಂ. ಗಂಗೂರ ಇದ್ದರು.


## 70 ಎಕರೆ ಆವರಣದಲ್ಲಿ 100 ಕೋಟಿ ವೆಚ್ಚದ 'ಜ್ಞಾನನಗರಿ' ನಿರ್ಮಾಣ; 10 ಸಾವಿರ ಬಡ ಮಕ್ಕಳಿಗೆ ಉಚಿತ ಶಿಕ್ಷಣದ ಮಹಾಸಂಕಲ:ಡಾ. ಮುರುಘರಾಜೇಂದ್ರ ಶ್ರೀ

ಆಳಂದ: ಉತ್ತರ ಕರ್ನಾಟಕದ ಶಿಕ್ಷಣ ಕ್ಷೇತ್ರದಲ್ಲಿ ಹೊಸ ಅಧ್ಯಾಯ ಬರೆಯುವ ಮಹತ್ವಾಕಾಂಕ್ಷಿ ಯೋಜನೆಯೊಂದನ್ನು ಜಿಡಗಾ ಮುಗಳಖೋಡ–ಕೊಟನೂರ ಶ್ರೀಮಠ ಘೋಷಿಸಿದೆ. ಬಡ ಹಾಗೂ ಗ್ರಾಮೀಣ ಭಾಗದ ಪ್ರತಿಭಾವಂತ ಮಕ್ಕಳಿಗೆ ಸಂಪೂರ್ಣ ಉಚಿತ, ಗುಣಮಟ್ಟದ ಹಾಗೂ ಮೌಲ್ಯಾಧಾ–ರಿತ ಶಿಕ್ಷಣ ನೀಡುವ ಉದ್ದೇಶದಿಂದ 70 ಎಕರೆ ವಿಶಾಲ ಪ್ರದೇಶದಲ್ಲಿ ಸುಮಾರು 100 ಕೋಟಿ ವೆಚ್ಚದಲ್ಲಿ ಅತ್ಯಾಧುನಿಕ ಶಿಕ್ಷಣ ಸಂಕೀರ್ಣ ನಿರ್ಮಿಸಿ, 10 ಸಾವಿರ ಮಕ್ಕಳಿಗೆ ಉಚಿತ ವಸತಿ ಸಹಿತ ಶಿಕ್ಷಣ ನೀಡುವ ಮಹಾಸಂಕಲ್ಪವನ್ನು ಕೈಗೊಂಡಿರುವುದಾಗಿ ಜಿಡಗಾ ಮುಗಳಖೋಡ–ಕೊಟನೂರ ಮಠದ ಪೀಠಾಧಿಪತಿ ಷಡಕ್ಷರಿ ಶಿವಯೋಗಿ ಡಾ. ಮುರುಘರಾಜೇಂದ್ರ ಮಹಾಸ್ವಾಮಿಗಳು ಘೋಷಿಸಿದರು.

ತಾಲೂಕಿನ ಜಿಡಗಾದ ನವಕಲ್ಯಾಣ ಮಠದ ಶಿವಯೋಗಿ ಜ್ಞಾನಮಂದಿರ ಉಚಿತ ವಸತಿ ಶಾಲೆಯಲ್ಲಿ ನಡೆದ ನೂತನ ಶೈಕ್ಷಣಿಕ ವರ್ಷದ ಆರಂಭೋತ್ಸವ, ವಿದ್ಯಾರ್ಥಿಗಳಿಗೆ ಉಚಿತ ಸಮವಸ್ತ್ರ ಹಾಗೂ ಕಲಿಕಾ ಸಾಮಗ್ರಿಗಳ ಕಿಟ್ ವಿತರಣೆ ಮತ್ತು ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಮೂರು ವರ್ಷಗಳ ಹಿಂದೆ ಸಾವಿರ ಬಡ ಮಕ್ಕಳಿಗೆ ಉಚಿತ ಶಿಕ್ಷಣ ನೀಡುವ ಗು–ರಿಯೊಂದಿಗೆ ಆರಂಭವಾದ ಈ ಶಿಕ್ಷಣ ಸೇವೆ ಈಗ ಮತ್ತಷ್ಟು ವಿಸ್ತಾರಗೊಳ್ಳುತ್ತಿದೆ. ಇದುವರೆಗೆ ಹಂತಹಂತವಾಗಿ ವಿದ್ಯಾರ್ಥಿಗಳ ಸಂಖ್ಯೆಯನ್ನು ಹೆಚ್ಚಿಸುವ ಯೋಜನೆ ಇದ್ದರೂ, ಇನ್ನು ಮುಂದೆ ಪ್ರತಿ ವರ್ಷ ಸುಮಾರು 1,000 ಮಕ್ಕಳಿಗೆ ಪ್ರವೇಶ ಕಲ್ಪಿಸಿ, ಮುಂದಿನ ದಿನಗಳಲ್ಲಿ ಒಟ್ಟು 10 ಸಾವಿರ ವಿದ್ಯಾರ್ಥಿಗಳಿಗೆ ಉಚಿತ ಶಿಕ್ಷಣ, ವಸತಿ ಹಾಗೂ ಸಂಪೂರ್ಣ ಶೈಕ್ಷಣಿಕ ಸೌಲಭ್ಯಗಳನ್ನು ಒದಗಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು.

ಈ ಮಹತ್ವಾಕಾಂಕ್ಷಿ ಯೋಜನೆಗಾಗಿ ಶ್ರೀಮಠವು ಈಗಾಗಲೇ 70 ಎಕರೆ ಭೂಮಿಯನ್ನು ಮೀಸಲಿಟ್ಟಿದ್ದು, ಅತ್ಯಾಧುನಿಕ ಶಾಲಾ ಕಟ್ಟಡಗಳು, ಸುಸಜ್ಜಿತ ವಿದ್ಯಾರ್ಥಿ



ವಸತಿ ನಿಲಯಗಳು, ವಿಜ್ಞಾನ ಮತ್ತು ಕಂಪ್ಯೂಟರ್ ಪ್ರಯೋಗಾಲಯಗಳು, ಗ್ರಂಥ–ಾಲಯ, ಕ್ರೀಡಾಂಗಣ, ಸಾಂಸ್ಕೃತಿಕ ವೇದಿಕೆ ಸೇರಿದಂತೆ ರಾಷ್ಟ್ರೀಯ ಮಟ್ಟದ ಶಿಕ್ಷಣ ಸಂಸ್ಥೆಗೆ ಅಗತ್ಯವಿರುವ ಎಲ್ಲ ಮೂಲಸೌಕರ್ಯಗಳನ್ನು ನಿರ್ಮಿಸಲಾಗುವುದು ಎಂದು ಹೇಳಿದರು.

"ನನ್ನ ಜೀವನದಲ್ಲಿ ಪರಮಪೂಜ್ಯ ಲಿಂ. ಶಿವಯೋಗಿ ಸಿದ್ಧರಾಮೇಶ್ವರ ಮಹಾಸ್ವಾಮಿಗಳು ಕರುಣಿಸಿದ ಶ್ರೀಸಂಪತ್ತಿನ ಅನುಗ್ರಹವನ್ನು ಅನುಭವಿಸಿದ್ದೇನೆ. ಆದರೆ ಇನ್ನು ಮುಂದೆ ನನ್ನ ಜೀವನದ ನಿಜವಾದ ಸಂತೋಷ ಮತ್ತು ಆತ್ಮತೃಪ್ತಿ ಬಡ ಮಕ್ಕಳಿಗೆ ಶಿಕ್ಷಣ ನೀಡಿ ಅವರನ್ನು ದೇಶದ ಆಸ್ತಿಯನ್ನಾಗಿ ರೂಪಿಸುವುದರಲ್ಲಿದೆ. ಶಿಕ್ಷಣವೇ ಸಮಾಜ ಪರಿವರ್ತನೆಯ ಅತ್ಯಂತ ದೊಡ್ಡ ಶಕ್ತಿ. ಆದ್ದ–ರಿಂದ ಶ್ರೀಮಠದ ಸಂಪತ್ತು ಸಮಾಜದ ಮಕ್ಕಳ ಭವಿಷ್ಯಕ್ಕಾಗಿ ಮೀಸಲಾಗಲಿದೆ" ಎಂದು ಡಾ. ಮುರುಘರಾಜೇಂದ್ರ ಮಹಾಸ್ವಾಮಿಗಳು ಭಾವನಾತ್ಮಕವಾಗಿ ಹೇಳಿದರು.

ಪಾಲಕರನ್ನು ಉದ್ದೇಶಿಸಿ ಮಾತನಾಡಿದ ಅವರು, "ನಿಮ್ಮ ಮಕ್ಕಳು ಶ್ರೀಮಠದ ಶಿಕ್ಷಣ ಸಂಸ್ಥೆಯಲ್ಲಿ ಪ್ರವೇಶ ಪಡೆದ ನಂತರ ಅವರ ಭವಿಷ್ಯದ ಬಗ್ಗೆ ಯಾವುದೇ ಆತಂಕ ಪಡುವ ಅಗತ್ಯವಿಲ್ಲ. ಗುಣಮಟ್ಟದ ಶಿಕ್ಷಣದೊಂದಿಗೆ ಉತ್ತಮ ಸಂಸ್ಕಾರ, ಶಿಸ್ತು ಹಾಗೂ ಸ್ಪರ್ಧಾತ್ಮಕ ಸಾಮರ್ಥ್ಯವನ್ನು ಬೆಳೆಸಿ ಉನ್ನತ ಹುದ್ದೆಗಳನ್ನು ಅಲಂಕರಿಸುವಂತೆ ಮಾಡುವ ಜವಾಬ್ದಾರಿ ಶ್ರೀಮಠದ್ದಾಗಿದೆ. ಆದ್ದರಿಂದ ಶೈಕ್ಷಣಿಕ ಅವಧಿಯ ಮಧ್ಯೆ ಸಣ್ಣಪುಟ್ಟ ಕುಟುಂಬ ಕಾರ್ಯಕ್ರಮಗಳ ನೆಪದಲ್ಲಿ ಮಕ್ಕಳನ್ನು ಮನೆಗೆ ಕರೆದುಕೊಂಡು ಹೋಗುವುದನ್ನು ಸಾಧ್ಯವಾದಷ್ಟು ತಪ್ಪಿಸಿ. ನಿರಂತರ ಅಧ್ಯಯನವೇ ಯಶಸ್ಸಿನ ಗುಟ್ಟು" ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಸಮವಸ್ತ್ರ ಹಾಗೂ ಕಲಿಕಾ ಸಾಮಗ್ರಿಗಳ ಕಿಟ್ ವಿತರಿಸಲಾಯಿತು.



# ಡಿವೈಡರ್‌ಗೆ ಕಾರು ಡಿಕ್ಕಿ; ತಾಯಿ–ಇಬ್ಬರು ಪುತ್ರರ ದುರ್ಮರಣ!

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯ ಬಸವನಬಾಗೇವಾಡಿ ತಾಲೂಕಿನ ಮನಗೂಳಿ ಸಮೀಪದ ರಾಷ್ಟ್ರೀಯ ಹೆದ್ದಾರಿ–50ರಲ್ಲಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಒಂದೇ ಕುಟುಂಬದ ಮೂವರು ಮೃತಪಟ್ಟಿರುವ ದಾರುಣ ಘಟನೆ ಶುಕ್ರವಾರ ನಡೆದಿದೆ.

ಮೃತರನ್ನು ಸತ್ಯವೇಣಿ (38), ಅವರ ಪುತ್ರರಾದ ಹರಿವೆಂಕಟರಾಮ್ (20) ಹಾಗೂ ಜಶ್ವಂತ (18) ಎಂದು ಗುರುತಿಸಲಾಗಿದೆ. ಕುಟುಂಬದ ಮುಖ್ಯಸ್ಥ ರಾಘವೇಂದ್ರ (41) ಗಂಭೀರವಾಗಿ ಗಾಯಗೊಂಡಿದ್ದು, ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಕಾರಟಗಿಯಿಂದ ಶಿರಡಿಗೆ ತೆರಳುತ್ತಿದ್ದ ಈ ಕುಟುಂಬದ ಎಂ–33 ಓ–4689 ನೋಂದಣಿಯ ಕ್ರೆಟಾ ಕಾರನ್ನು ಹರಿವೆಂಕಟರಾಮ್ ಚಾಲನೆ ಮಾಡುತ್ತಿದ್ದರು. ಈ ವೇಳೆ ಕಾರು ನಿಯಂತ್ರಣ ತಪ್ಪಿ ರಸ್ತೆ ಡಿವೈಡರ್‌ಗೆ ಡಿಕ್ಕಿ ಹೊಡೆದ ಪರಿಣಾಮ ಭೀಕರ ಅಪಘಾತ ಸಂಭವಿಸಿದೆ.

ಪ್ರಾಥಮಿಕ ಮಾಹಿತಿಯ ಪ್ರಕಾರ, ಚಾಲಕನಿಗೆ ನಿದ್ದೆ ಮಂಪರು ಬಂದಿರುವುದೇ ಅಪಘಾತಕ್ಕೆ ಕಾರಣವಾಗಿರಬಹುದು ಎಂಬ ಶಂಕೆ ವ್ಯಕ್ತವಾಗಿದೆ. ಮಾಹಿತಿ ತಿಳಿದು ಮನಗೂಳಿ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಿಸಿ ತನಿಖೆ ಮುಂದುವರಿಸಿದ್ದಾರೆ.




# ಚಡಚಣದಲ್ಲಿ ತಾಪಂ ಸ್ವೀಪ್ ಸಮಿತಿಯಿಂದ ಎಸ್‌ಐಆರ್ ಜಾಗೃತಿ ಜಾಥಾ

■ ಉದಯರಶ್ಮಿ ದಿನಪತ್ರಿಕೆ

ಚಡಚಣ: ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026ರ ಕುರಿತು ಸಾರ್ವಜನಿಕರಲ್ಲಿ ವ್ಯಾಪಕ ಅರಿವು ಮೂಡಿಸುವ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಬಲಪಡಿಸುವ ನಿಟ್ಟಿನಲ್ಲಿ ತಾಲೂಕು ಪಂಚಾಯತ ಸ್ವೀಪ್ ಸಮಿತಿ ಶನಿವಾರದಂದು ಪಟ್ಟಣದಲ್ಲಿ ಆಯೋಜಿಸಿದ್ದ ಜಾಗೃತಿ ಜಾಥಾವು ಅರ್ಥಪೂರ್ಣವಾಗಿ ಜರುಗಿತು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ತಾಲೂಕು ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಅಶೋಕ ರಾಠೋಡರವರು. ಪ್ರಜಾಪ್ರಭುತ್ವದ ಯಶಸ್ಸು ಮತದಾರರ ಸಕ್ರಿಯ ಭಾಗವಹಿಸುವಿಕೆಯ ಮೇಲೆ ಅವಲಂಬಿತವಾಗಿದೆ. ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026 ಅಭಿಯಾನವು ಪ್ರತಿಯೊಬ್ಬ ಅರ್ಹ ನಾಗರಿಕನೂ ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ನೋಂದಾಯಿಸಿಕೊಳ್ಳಲು ಒಂದು ಸುಸಂದರ್ಭವಾಗಿದೆ. ತಾಲೂಕಿನ ಪ್ರತಿಯೊಬ್ಬ ನಾಗರಿಕನು ಈ ಪ್ರಕ್ರಿಯೆಯಲ್ಲಿ ಭಾಗಿಯಾಗಿ, ಜವಾಬ್ದಾರಿಯುತ ಮತದಾರರಾಗಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ತಹಶೀಲ್ದಾರರಾದ ಸಂಜಯ ಇಂಗಳೆಯವರು. ಪ್ರತಿಯೊಬ್ಬ ಅರ್ಹ ನಾಗರಿಕನೂ ಮತದಾನರರ ಪಟ್ಟಿಯಲ್ಲಿ ತನ್ನ ಹೆಸರನ್ನು ನೋಂದಾಯಿಸಿಕೊಳ್ಳುವುದು ಮೂಲಭೂತ ಹಕ್ಕು ಮತ್ತು ಕರ್ತವ್ಯವಾಗಿದೆ. ಮತದಾರರ ಪಟ್ಟಿ ಪರಿಷ್ಕರಣೆ–2026ರ ಕುರಿತು ಜನಸಾಮಾನ್ಯರಲ್ಲಿ ಜಾಗೃತಿ ಮೂಡಿಸುವ ಮೂಲಕ, ಪ್ರಜಾಪ್ರಭುತ್ವದ ಅಡಿಪಾಯವನ್ನು ಮತ್ತಷ್ಟು ಗಟ್ಟಿಗೊಳಿಸುವುದು ಈ ಅಭಿಯಾನದ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾ.ಪಂ ಸಾಹಯಕ ನಿರ್ದೇಶಕರಾದ ಶಿವದತ್ತ ಕೊಟ್ಟಲಗಿ, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶ್ರೀ ಸಂಗಮೇಶ್ವರ ಪ್ರೌಢ ಶಾಲೆಯ ಮುಖ್ಯ ಗುರುಗಳಾದ ಎಚ್.ಆರ್.ಬಗಲಿ ಹಾಗೂ ಸಿಬ್ಬಂದಿ ವರ್ಗ ಸೇರಿದಂತೆ ವಿದ್ಯಾರ್ಥಿಗಳು ಹಾಜರಿದ್ದು, ಪಟ್ಟಣ ಪಂಚಾಯತ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉತ್ಸಹದಿಂದ ಜಾಗೃತಿ ಜಾಥಾದಲ್ಲಿ ಪಾಲ್ಗೊಂಡರು. ಇಲಾಖಾ ಸಿಬ್ಬಂದಿಗಳ ಈ ಒಗ್ಗಟ್ಟಿನ ಪ್ರದರ್ಶನವು ಸಾರ್ವಜನಿಕರಲ್ಲಿ ಮತದಾನದ ಮಹತ್ವದ ಕುರಿತು ಬಲವಾದ ಸಂದೇಶವನ್ನು ರವಾನಿಸಿತು. ಜಾಥಾದ ಉದ್ದಕ್ಕೂ ಮತದಾರರ ಪಟ್ಟಿಗೆ ಹೆಸರು ನೋಂದಾಯಿಸುವ ತಿದ್ದುಪಡಿ ಮಾಡುವ ಹಾಗೂ ಪಟ್ಟಿಯಿಂದ ಹೆಸರು ಪರಿಶೀಲಿಸಿಕೊಳ್ಳುವ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಲಾಯಿತು.



# ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯದ ಪ್ರಗತಿ ಪರಿಶೀಲನೆ

■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ಯಲಗೋಡ, ವಂದಾಲ ಗ್ರಾಮಗಳಿಗೆ ಭೇಟಿ ನೀಡಿದ ತಹಶೀಲ್ದಾರ ನಿಂಗಣ್ಣ ಬಿರಾದಾರ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ 2026 ಕಾರ್ಯದ ಪ್ರಗತಿ ಪರಿಶೀಲಿಸಿದರು.

ತಾಲ್ಲೂಕಿನ ಗ್ರಾಮಗಳಿಗೆ ಶುಕ್ರವಾರ ಭೇಟಿ ನೀಡಿ ಮಾತನಾಡಿದ ತಹಶೀಲ್ದಾರ, ದೇವರಹಿಪ್ಪರಗಿ ವಿಧಾನಸಭಾ ಮತಕ್ಷೇತ್ರದಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌–ಆಯ್‌ಆರ್–2026) ಪ್ರಕ್ರಿಯೆ ಆರಂಭವಾಗಿದೆ. ಮತದಾರರಿಗೆ ಗಣತಿ ನಮೂನೆ ವಿತರಿಸಲು ಮತಗಟ್ಟೆ ಅಧಿಕಾರಿಗಳ(ಬಿಎಲ್‌ಓ) ಮನೆ,ಮನೆ ಭೇಟಿ ಪ್ರಾರಂಭವಾಗಿದೆ.

ದಿ:16 ಜೂನ್ 2026ರಂತೆ ಮತದಾರರ ಪಟ್ಟಿಯಲ್ಲಿ 2,30,780 ಮತದಾರರಿದ್ದಾರೆ. ಗಣತಿ ನಮೂನೆಗಳನ್ನು ಮುದ್ರಿಸಿ ಮತಗಟ್ಟೆ ಅಧಿಕಾರಿಗಳಿಗೆ ತಲುಪಿಸಲಾಗಿರುತ್ತದೆ. ಕ್ಷೇತ್ರದಲ್ಲಿ ಶೇ 95.45 ಮ್ಯಾಪ್ ಮಾಡಲಾದ ಒಟ್ಟು ಮತದಾರರಿದ್ದು, 2,30,616 ಒಟ್ಟು ಗಣತಿ ನಮೂನೆಗಳನ್ನು ವಿತರಿಸಲಾಗಿದೆ. ಈವರೆಗೆ 57,338 ಗಣತಿ ನಮೂನೆಗಳು ಗಣಕೀಕರಣಗೊಂಡಿವೆ. 83 ಮತದಾರರು ಆನ್‌ಲೈನ್‌ನಲ್ಲಿ ಗಣತಿ ನಮೂನೆಗಳನ್ನು ಸಲ್ಲಿಸಿದ್ದು, 17 ಗೈರು ಹಾಜರಾದ ಮತದಾರರು, 425 ಜನ ಶಾಶ್ವತವಾಗಿ ಸ್ಥಳಾಂತರಗೊಂಡ ಮತದಾರರು, 806 ಮರಣ ಹೊಂದಿರುವ ಮತದಾರರ ಮಾಹಿತಿ ಇದೆ. ಇನ್ನೂ 75 ಮತದಾರರು ಈಗಾಗಲೇ ನೊಂದಾಯಿಸಿಕೊಂಡಿದ್ದಾರೆ. ಇದೇ ದಿ:29 ರವರೆಗೆ ಮನೆ, ಮನೆ ಗಣತಿ ಹಾಗೂ ಡಿಜಿಟಲೀಕರಣ ಅವಧಿ ಎಂದರು.

ಗ್ರಾಮ ಆಡಳಿತಾಧಿಕಾರಿ ಸಂಗಮೇಶ ಗ್ವಾಳೇದ, ಬಿಎಲ್‌ಓಗಳಾದ ರಾಘವೇಂದ್ರ, ಸುರೇಶ ಬಡಿಗೇರ, ದಸ್ತಗೀರಸಾಬ್ ಬಗಲಿ ಇದ್ದರು.

# ಸರ್ಕಾರಿ ಶಾಲಾ ಮಕ್ಕಳಿಗೆ ಉಚಿತ ನೀರಿನ ಬಾಟಲ್ ವಿತರಣೆ

■ ಉದಯರಶ್ಮಿ ದಿನಪತ್ರಿಕೆ



ಜಮಖಂಡಿ: ಮಕ್ಕಳ ಆರೋಗ್ಯದ ದೃಷ್ಟಿಯಿಂದ ಶುದ್ಧ ಕುಡಿಯುವ ನೀರಿನ ಅನಿವಾರ್ಯತೆ ಬಹಳಷ್ಟಿದೆ. ಎಂದು ಟ್ರಸ್ಟ್ ನ ಸಂಘಟಕರಾದ ಪಂಚಾಕ್ಷರಿ ಮಠದ ಹೇಳಿದರು.

ಜಮಖಂಡಿ ತಾಲೂಕಿನ ತುಬಚಿ ಗ್ರಾಮದ ದಳವಾಯಿ ವಸತಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿ, ಶಾಲೆಗೆ ಬರುವ ಎಲ್ಲಾ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ನಮ್ಮ ಟ್ರಸ್ಟ್ ವತಿಯಿಂದ ಈ ಸಣ್ಣ ಕಾಣಿಕೆಯನ್ನು ನೀಡಿದ್ದೇವೆ. ಇಂತಹ ಸಾಮಾಜಿಕ ಕಾರ್ಯಕ್ರಮಗಳು ಮುಂದೆಯೂ ನಿರಂತರವಾಗಿ ಮುಂದುವರಿಯಲಿವೆ," ಎಂದು ತಿಳಿಸಿದರು.

ರೈತ ಮುಖಂಡರಾದ ಬಿ.ಎಸ್. ಸಿಂಧೂರ ಮಾತನಾಡಿ, ವಿದ್ಯಾರ್ಥಿಗಳು ಉತ್ತಮ ಶಿಕ್ಷಣದೊಂದಿಗೆ ಆರೋಗ್ಯವಂತರಾಗಿಯೂ ಬೆಳೆಯಬೇಕು. ಪ್ಲಾಸ್ಟಿಕ್ ಬಾಟಲ್‌ಗಳ ಅತಿಯಾದ ಬಳಕೆಯನ್ನು ಕಡಿಮೆ ಮಾಡಿ, ಇಂತಹ ಮರುಬಳಕೆ ಮಾಡಬಹುದಾದ ಬಾಟಲ್‌ಗಳನ್ನು ಬಳಸುವುದರಿಂದ ಪರಿಸರಕ್ಕೂ ಒಳಿತು. ಟ್ರಸ್ಟ್‌ನ ಈ ಕೆಲಸವು ಇತರರಿಗೆ ಮಾದರಿಯಾಗಿದೆ," ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮುಖಂಡರಾದಸುರೇಶಗೌಡಪಾಟೀಲ್‌ಮಾತನಾಡಿ, ಸಮಾಜಸೇವೆಯಲ್ಲಿ ಸದಾ ಮುಂಚೂಣಿಯಲ್ಲಿರುವ ಶಿವಲಿಂಗೇಶ್ವರ ಚಾರಿಟೇಬಲ್ ಟ್ರಸ್ಟ್‌ನ ಈ ಮಾನವೀಯ ಕಾರ್ಯ ಶ್ಲಾಘನೀಯ ಎಂದರು.

ಈ ಸಂದರ್ಭದಲ್ಲಿ ಎಸ್ ಡಿ ಎಮ್ ಸಿ ಅಧ್ಯಕ್ಷ ಮಲ್ಲಿಕಾರ್ಜುನ್ ದಳವಾಯಿ, ಬಸಯ್ಯ ಮಠದ, ಶಿವನಪ್ಪ ದಳವಾಯಿ, ಬಸವರಾಜ ಪಾಟೀಲ, ಬಾಬುಗೌಡ ಪಾಟೀಲ, ಮುತ್ತಪ್ಪ ಕುಂಬಾರ, ಬಸಪ್ಪ ಬಾಲಪ್ಪನವರ, ಶಿವಲಿಂಗಪ್ಪ ಕುಂಬಾರ, ಮಹಾಂತೇಶ ಘಟಗಿ ಸ್ವಾಗತಿಸಿದರು. ಮಹಾಂತೇಶ ಹಾಲಳ್ಳಿ ನಿರೂಪಿಸಿದರು.

# ಜು.14 ರಂದು ನೈಕಾನ್ ಮಿರರ್‌ಲೆಸ್ ತಂತ್ರಜ್ಞಾನ ಕಾರ್ಯಾಗಾರ

■ ಉದಯರಶ್ಮಿ ದಿನಪತ್ರಿಕೆ





ವಿಜಯಪುರ: ನಗರದ ಬಿ.ಎಲ್.ಡಿ.ಇ. ಸಂಸ್ಥೆಯ ವಚನ ಪಿತಾಮಹ ಡಾ. ಫ. ಗು. ಹಳಕಟ್ಟಿ ಎಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯದ ಎಂ.ಬಿ.ಎ. ವಿಭಾಗ, ಆರ್ಯನ್ ಡಿಜಿಟಲ್ ಲ್ಯಾಬ್, ವಿಜಯಪುರ ಹಾಗೂ ನೈಕಾನ್ ಸ್ಕೂಲ್ ಇಂಡಿಯಾ ಇವರ ಸಹಯೋಗದಲ್ಲಿ ನೈಕಾನ್ ಮಿರರ್‌ಲೆಸ್ ತಂತ್ರಜ್ಞಾನ ಕುರಿತು ವಿಶೇಷ ಕಾರ್ಯಾಗಾರ ಜುಲೈ 14 ರಂದು ಮಂಗಳವಾರ ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 3.30ರ ವರೆಗೆ ನಡೆಯಲಿದೆ.

ಎಂಜಿನಿಯರಿಂಗ್ ಕಾಲೇಜಿನ ಸಭಾಂಗಣದಲ್ಲಿ ನಡೆಯಲಿರುವ ಈ ಕಾರ್ಯಾಗಾರದಲ್ಲಿ ನೈಕಾನ್‌ನ ಅತ್ಯಾಧುನಿಕ ಮಿರರ್‌ಲೆಸ್ ಕ್ಯಾಮೆರಾ ತಂತ್ರಜ್ಞಾನದ ಕುರಿತು ಪ್ರಾಯೋಗಿಕ ಅನುಭವವನ್ನು ನೀಡಲಾಗುವುದು. ಛಾಯಾಗ್ರಹಣದ ಸೈದ್ಧಾಂತಿಕ ಜ್ಞಾನ ಮತ್ತು ಉದ್ಯಮದಲ್ಲಿನ ಪ್ರಾಯೋಗಿಕ ಬಳಕೆಯ ನಡುವಿನ ಅಂತರವನ್ನು ಕಡಿಮೆ ಮಾಡುವುದರ ಜೊತೆಗೆ ವಿದ್ಯಾರ್ಥಿಗಳು ಮತ್ತು ಛಾಯಾಗ್ರಹಣ ಆಸಕ್ತರಿಗೆ ಆಧುನಿಕ ಇಮೇಜಿಂಗ್ ತಂತ್ರಜ್ಞಾನಗಳ ಬಗ್ಗೆ ಸಮಗ್ರ ಅರಿವು ಮೂಡಿಸುವುದು ಈ ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ.

ಈ ವಿಶೇಷ ತರಬೇತಿಯನ್ನು ನೈಕಾನ್‌ನ ಖ್ಯಾತ ಕಂಟೆಂಟ್ ಕ್ರಿಯೇಟರ್ ಜೋಯೆಲ್ ಶಮನ್ ಡಿ' ಸೋಜಾ ಮತ್ತು ಕರ್ನಾಟಕ ವನ್ಯಜೀವಿ ಮಂಡಳಿ ಸದಸ್ಯ ಹಾಗೂ ಸೊಸೈಟಿ ಫಾರ್ ಪ್ರೊಟೆಕ್ಷನ್ ಆಫ್ ಪ್ಲ್ಯಾಂಟ್ಸ್ ಅಂಡ್ ಎನಿಮಲ್ಸ್ ಅಧ್ಯಕ್ಷ ಧ್ರುವ ಎಂ. ಪಾಟೀಲ ನಡೆಸಿಕೊಡಲಿದ್ದಾರೆ. ವನ್ಯಜೀವಿಗಳ ಭಾವಚಿತ್ರ ಪ್ರಯಾಣ ಹಾಗೂ ವಾಣಿಜ್ಯ ಛಾಯಾಗ್ರಹಣದಲ್ಲಿ ನೈಕಾನ್ ಮಿರರ್‌ಲೆಸ್ ಕ್ಯಾಮೆರಾಗಳ ಬಳಕೆಯ ಕುರಿತು ತಮ್ಮ ವೃತ್ತಿಪರ ಅನುಭವಗಳು, ಸೃಜನಾತ್ಮಕ ತಂತ್ರಗಳು ಹಾಗೂ ಉಪಯುಕ್ತ ಮಾಹಿತಿಯನ್ನು ಅವರು ಹಂಚಿಕೊಳ್ಳಲಿದ್ದಾರೆ. ಈ ಕಾರ್ಯಾಗಾರದಲ್ಲಿ ಭಾಗವಹಿಸುವವರು ಕ್ಯಾಮೆರಾ ನಿರ್ವಹಣೆ, ಅತ್ಯಾಧುನಿಕ ಆಟೋಫೋಕಸ್ ತಂತ್ರಜ್ಞಾನ, ವಿಡಿಯೋ ಸಾಮರ್ಥ್ಯಗಳು, ಲೆನ್ಸ್ ಆಯ್ಕೆ, ಹಾಗೂ ಡಿಜಿಟಲ್ ಕಂಟೆಂಟ್ ಕ್ರಿಯೇಷನ್ ಕಾರ್ಯವಿಧಾನಗಳ ಕುರಿತು ಪ್ರಾಯೋಗಿಕ ಜ್ಞಾನವನ್ನು ಪಡೆಯಬಹುದಾಗಿದೆ. ಈ ಕಾರ್ಯಾಗಾರವು ಉದ್ಯಮದ ಪರಿಣಿತರೊಂದಿಗೆ ನೇರ ಸಂವಾದ ನಡೆಸಲು, ನಿಕಾನ್‌ನ ಇತ್ತೀಚಿನ ಮಿರರ್‌ಲೆಸ್ ಕ್ಯಾಮೆರಾಗಳನ್ನು ಅನುಭವಿಸಲು ಹಾಗೂ ಡಿಜಿಟಲ್ ಛಾಯಾಗ್ರಹಣ ಮತ್ತು ದೃಶ್ಯ ಕಥನ (ಗ್ಹಿಣಚಿಟ ಖಣಂಡಿಥಿಣಜಟಟುಟಿರ) ಕ್ಷೇತ್ರದಲ್ಲಿನ ಹೊಸ ಪ್ರವೃತ್ತಿಗಳನ್ನು ತಿಳಿದುಕೊಳ್ಳಲು ಅಪರೂಪದ ಅವಕಾಶವನ್ನು ಒದಗಿಸುತ್ತದೆ.

ಆಸಕ್ತ ವಿದ್ಯಾರ್ಥಿಗಳು, ಛಾಯಾಗ್ರಹಣ ಪ್ರೇಮಿಗಳು ಹಾಗೂ ಸೃಜನಶೀಲ ಕ್ಷೇತ್ರದಲ್ಲಿ ಆಸಕ್ತಿ ಹೊಂದಿರುವವರು ಭಾಗವಹಿಸಬಹುದಾಗಿದೆ. ಪ್ರವೇಶ ಉಚಿತವಿದ್ದು ಅಸಕ್ತರು ಡಾ. ಮುರುಗೇಶ ಪಟ್ಟಣಶೆಟ್ಟಿ, ಮೊ: 9739317408 ಇವರನ್ನು ಸಂಪರ್ಕಿಸಿ ತಮ್ಮ ಹೆಸರುಗಳನ್ನು ನೋಂದಾಯಿಸಬಹುದಾಗಿದೆ.

## ವಿಜಯಪುರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಮುಖಂಡರ ಆರೋಪ

# ಕಾಂಗ್ರೆಸ್ ನಿಂದ ಎಸ್‌ಐಆರ್ ಪ್ರಕ್ರಿಯೆ ನಿಷ್ಕ್ರೀಯಗೊಳಿಸುವ ಷಡ್ಯಂತ್ರ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಎಸ್‌ಐಆರ್ ಪ್ರಕ್ರಿಯೆ ನಿಷ್ಕ್ರೀಯಗೊಳಿಸುವ ಷಡ್ಯಂತ್ರದ ಭಾಗವಾಗಿ ಶಾಶ್ವತ ರಹವಾಸಿ ಪ್ರಮಾಣಪತ್ರ ಪ್ರಕ್ರಿಯೆ ಆರಂಭಿಸಲು ರಾಜ್ಯದ ಆಡಳಿತಾರೂಢ ಕಾಂಗ್ರೆಸ್ ಸರ್ಕಾರ ಮಾಡುತ್ತಿದೆ, ಇಷ್ಟು ದಿನ ಈ ಪ್ರಕ್ರಿಯೆ ನೆನಪಾಗಲಿಲ್ಲವೇ? ಈಗ ಎಸ್‌ಐಆರ್ ನಡೆದಿರುವಾಗ ಇದರ ಔಚಿತ್ಯವೇನಿತ್ತು ಎಂದು ಬಿಜೆಪಿ ಮುಖಂಡ ಕೃಷ್ಣಾ ಗುನ್ನಾಳಕರ ಖಾರವಾಗಿ ಪ್ರಶ್ನಿಸಿದರು.

ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಕ್ರಮ ವಲಸಿಗರಿಗೆ ರಕ್ಷಣೆ ನೀಡುವ ಎಂಬ ಉದ್ದೇಶದಿಂದ ಕಾಂಗ್ರೆಸ್ ಸರ್ಕಾರ ಈ ಪಿಆರ್‌ಸಿ ಎಂಬ ಪ್ರಕ್ರಿಯೆ ಜಾರಿಗೆ ತರುತ್ತಿದೆ, ಇಲ್ಲಿರುವ ಅಕ್ರಮ ವಲಸಿಗರಿಗೆ ಶಾಶ್ವತ ರಹವಾಸಿ ಪ್ರಮಾಣ ಪತ್ರ ನೀಡುವ ಮೂಲಕ ತನ್ನ ವೋಟ್ ಬ್ಯಾಂಕ್ ಭದ್ರಪಡಿಸಿಕೊಳ್ಳಲು ಕಾಂಗ್ರೆಸ್ ಹವಣಿಸುತ್ತಿದೆ, ಈ ರೀತಿ ಅಕ್ರಮ ವಲಸಿಗರಿಗೆ ಈ ರೀತಿಯ ರಕ್ಷಣೆ ದೊರಕಿದರೆ ಅವರು ಇಲ್ಲಿ ಶಾಶ್ವತವಾಗಿ ನೆಲೆಸಲು ಬಲ ನೀಡಲಿದೆ, ಇದು ರಾಷ್ಟ್ರದ ಭದ್ರತೆಗೆ ದೊಡ್ಡ ಅಪಾಯವಾಗಿದೆ, ಕೂಡಲೇ ಈ ಅವೈಜ್ಞಾನಿಕ ಪ್ರಕ್ರಿಯೆಯನ್ನು ಕೈ ಬಿಡಬೇಕು ಎಂದರು.

ಈ ಅವೈಜ್ಞಾನಿಕ ಹಾಗೂ ತರ್ಕರಹಿತ ಪ್ರಕ್ರಿಯೆಯ ಬಗ್ಗೆ ಕೇಂದ್ರದ ಅನೇಕ ನಾಯಕರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಯಾವ ರಾಜ್ಯದಲ್ಲಿಯೂ ಸಹ ಶಾಶ್ವತ ರಹವಾಸಿ ಪತ್ರ ನೀಡುವುದಿಲ್ಲ, ಇದು ರಾಜ್ಯ ಸರ್ಕಾರದ ಅಧಿಕಾರ ವ್ಯಾಪ್ತಿಯಲ್ಲಿಯೂ ಇಲ್ಲ, ಇದೊಂದು ಸಂವಿಧಾನ ಬಾಹಿರ ಪ್ರಕ್ರಿಯೆ ಎಂದು ಗುನ್ನಾಳಕರ ಹೇಳಿದರು.

ಕಾಂಗ್ರೆಸ್ ಪಕ್ಷದವರು ಅತ್ಯಂತ ಸರಳವಾಗಿರುವ ಎಸ್‌ಐಆರ್ ಪ್ರಕ್ರಿಯೆಯನ್ನು ಇನ್ನಷ್ಟೂ ಕಠಿಣಗೊಳಿಸುವ ಕಾರ್ಯ ಮಾಡಿ ಗೊಂದಲ ಸೃಜಿಸುತ್ತಿದ್ದಾರೆ, ಶಾಶ್ವತ ರಹವಾಸಿ ಪ್ರಮಾಣ ಪತ್ರ ಎಂಬ ವಿಷಯವನ್ನು ಮುನ್ನೆಲೆಗೆ ತಂದಿದ್ದಾರೆ, ಶಾಶ್ವತ ರಹವಾಸಿ ಪ್ರಮಾಣ ಪತ್ರ ಈಗ ನೀಡುವ ಔಚಿತ್ಯವೇನಿತ್ತು? ರಾಷ್ಟ್ರೀಯ ಭದ್ರತೆಗೆ ಇದು ದೊಡ್ಡ ಅಪಾಯಕಾರಿಯಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಜಲಸಂಪನ್ಮೂಲ ಸಚಿವ ಸ್ಥಾನ ವಿಜಯಪುರದವರಿಗೆ ನೀಡಿ

ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ ಮಾತನಾಡಿ, ಮಹಾರಾಷ್ಟ್ರದಲ್ಲಿ ಮಳೆ ಸುರಿಯುತ್ತಿದೆ, ಆಲಮಟ್ಟಿ ಜಲಾಶಯದಲ್ಲಿ ನೀರು ಹರಿದು ಬರುತ್ತಿದೆ, ಆದರೂ ಅನೇಕ ಗ್ರಾಮಗಳಲ್ಲಿ ಕುಡಿಯುವ ನೀರಿನ ಹಾಹಾಕಾರ ಉಂಟಾಗಿದೆ, ಬೆಂಗಳೂರಿನವರು ನೀರಾವರಿ ಮಂತ್ರಿಯಾದರೆ ಯಾವ ಪ್ರಯೋಜನವಾಗುವುದಿಲ್ಲ, ಹೀಗಾಗಿ ವಿಜಯಪುರ ಭಾಗದವರು ಜಲಸಂಪನ್ಮೂಲ ಸಚಿವರಾಗಬೇಕು, ಆಲಮಟ್ಟಿ ಜಲಾಶಯದ ಸಮಸ್ಯೆ ಮುಖ್ಯಮಂತ್ರಿ ಹಾಗೂ ಬೆಂಗಳೂರಿನವರಾದ ಜಲಸಂಪನ್ಮೂಲ ಸಚಿವರಿಗೆ ಅರ್ಥವಾಗುವುದೇ ಇಲ್ಲ. ಹೀಗಾಗಿ ನಮ್ಮ ವಿಜಯಪುರದವರಿಗೆ ಈ ಖಾತೆ ವಹಿಸಿ ಎಂದರು. ವಿಶೇಷ ಪ್ರಕರಣ ಎಂದು ವಿಜಯಪುರ ಜನತೆಗೆ ಜಲಾಶಯದಿಂದ ನೀರು ಬಿಡುಗಡೆ ಮಾಡಿಸುವ ನಿಟ್ಟಿನಲ್ಲಿ ಕ್ರಮ ಜರುಗಿಸಬೇಕು ಎಂದರು.

ಜಿಲ್ಲಾ ಪಂಚಾಯತ ಮಾಜಿ ಸದಸ್ಯ ಸಾಬು ಮಾಶ್ಯಾಳ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಈರಣ್ಣ ರಾವೂರ, ಮಾಧ್ಯಮ ಪ್ರಮುಖ ವಿಜಯ ಜೋಶಿ ಮೊದಲಾದವರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

**ಖೊಟ್ಟಿ ದಾಖಲೆಗಳ ಆಧಾರದಲ್ಲಿ ಮಾನ್ಯತೆ ಪಡೆದಿದ್ದ ಆರೋಪ । ಧಾರವಾಡದ ಆಯುಕ್ತರ ಕಚೇರಿಯ ನಿರ್ದೇಶಕರ ಆದೇಶ । ವಿದ್ಯಾರ್ಥಿಗಳಿಗೆ ಹತ್ತಿರದ ಸರ್ಕಾರಿ ಶಾಲೆಗೆ ದಾಖಲಿಸಲು ಸೂಚನೆ**

# ಮುದ್ದೇಬಿಹಾಳದ ವಿದ್ಯಾಸ್ಫೂರ್ತಿ ಶಾಲೆಯ ಅನುಮತಿ ರದ್ದು!

■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ಇಲ್ಲಿನ ವಿದ್ಯಾನಗರದಲ್ಲಿನ ವಿದ್ಯಾಸ್ಫೂರ್ತಿ ಇಂಟರ್‌ನ್ಯಾಶನಲ್ ಪಬ್ಲಿಕ್ ಸ್ಕೂಲ್ ನ ಮಾನ್ಯತೆಯನ್ನು ರದ್ದುಪಡಿಸಿ ಧಾರವಾಡದ ಆಯುಕ್ತರ ಕಚೇರಿಯ ನಿರ್ದೇಶಕರು ಆದೇಶಿಸಿದ್ದಾರೆ.

ಶಾಲೆಗೆ ಅನುಮತಿ ಪಡೆಯುವ ವೇಳೆ ಖೊಟ್ಟಿ ದಾಖಲೆಗಳನ್ನು ಇಲಾಖೆಗೆ ನೀಡಿ ಅನುಮತಿ ಪಡೆದ ಹಿನ್ನೆಲೆ ತನಿಖೆ ನಡೆಸಿ ಈ ಶಾಲೆಯ ಮಾನ್ಯತೆಯನ್ನು ರದ್ದುಪಡಿಸಿದ ಅಧಿಕಾರಿಗಳು ಈಗಾಗಲೇ ವ್ಯಾಸಾಂಗ ಮಾಡುತ್ತಿರುವ ವಿದ್ಯಾರ್ಥಿಗಳು ಹತ್ತಿರದ ಸರ್ಕಾರಿ ಶಾಲೆಗೆ ದಾಖಲಿಸುವಂತೆ ಮತ್ತು ಶಾಲೆಯ ಎಲ್ಲ ದಾಖಲೆಗಳನ್ನು ಹಸ್ತಾಂತರಿಸುವಂತೆ ಸೂಚಿಸಿದ್ದಾರೆ.

ಏನಿದು ಅಕ್ರಮ?

ಶಾಲೆಯು ಮಾನ್ಯತೆ ಪಡೆಯಲು ಸಲ್ಲಿಸಿದ್ದ ದಾಖಲೆಗಳಲ್ಲಿ ಹಲವು ಗಂಭೀರ ವೈರುಧ್ಯಗಳು ತನಿಖೆಯಿಂದ ಪತ್ತೆಯಾಗಿವೆ. ಶಾಲೆ ಕಾರ್ಯನಿರ್ವಹಿಸುತ್ತಿರುವ ಭೂಮಿ, ಕಟ್ಟಡ, ಮೂಲಸೌಕರ್ಯ ಹಾಗೂ ಇಲಾಖೆಗೆ ಸಲ್ಲಿಸಲಾದ ದಾಖಲೆಗಳಲ್ಲಿ ಹೊಂದಾಣಿಕೆ ಇಲ್ಲದಿರುವುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ. ಅಲ್ಲದೆ, ಮಾನ್ಯತೆ ಪಡೆಯಲು ಕಡ್ಡಾಯವಾಗಿರುವ ಷರತ್ತುಗಳನ್ನು ಉಲ್ಲಂಘಿಸಿರುವುದು ಹಾಗೂ ಇಲಾಖೆಗೆ ತಪ್ಪು ಮಾಹಿತಿಯನ್ನು ನೀಡಿರುವುದು ದೃಢಪಟ್ಟ ಹಿನ್ನೆಲೆಯಲ್ಲಿ ಸರ್ಕಾರ, ಕರ್ನಾಟಕ ಶಿಕ್ಷಣ ಅಧಿನಿಯಮದ ಅನ್ವಯ ಮಾನ್ಯತೆಯನ್ನು ರದ್ದುಪಡಿಸಿದೆ.

ಇದಲ್ಲದೆ, ಶಾಲೆಯು ಸಲ್ಲಿಸಿದ್ದ ಕೆಲವು ದಾಖಲೆಗಳು ಮತ್ತು ಸ್ಥಳ ಪರಿಶೀಲನೆಯಲ್ಲಿ ಕಂಡುಬಂದ ವಾಸ್ತವ ಸ್ಥಿತಿಯ ನಡುವೆ ಸ್ಪಷ್ಟ ವ್ಯತ್ಯಾಸ ಕಂಡುಬಂದಿರುವುದನ್ನೂ ಅಧಿಕಾರಿಗಳು ದಾಖಲಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಶಿಕ್ಷಣ ಇಲಾಖೆಯು ಶಾಲೆಯ ವಿರುದ್ಧ ಕಠಿಣ ಕ್ರಮ ಕೈಗೊಂಡಿದೆ.

ಹೋರಾಟದಿಂದ ಬಹಿರಂಗವಾದ ಅಕ್ರಮಮತಕ್ಷೇತ್ರದಲ್ಲಿ ಹೊಸ ಶಾಲೆಗೆ ನೀಡುವ ಅನುಮತಿ ಮತ್ತು ಮನ್ಯತೆ ನವೀಕರಣದಲ್ಲಿ ಭಾರೀ ಅಕ್ರಮಗಳು ನಡೆದಿವೆ ಎಂಬ ಖಚಿತ ಮಾಹಿತಿ ಮೇರೆಗೆ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿಯ ಚಂದ್ರಕಾಂತ ಕಾದ್ರೊಳ್ಳಿ ಬಣದ ಜಿಲ್ಲಾಧ್ಯಕ್ಷ ಬಾಲಚಂದ್ರ ಹುಲ್ಲೂರ ನೇತೃತ್ವದಲ್ಲಿ ಇಲ್ಲಿನ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ದೂರು ಪತ್ರವನ್ನು ನೀಡಿದ್ದರು. ಅಧಿಕಾರಿ ಯಾವುದೇ ಕ್ರಮಕ್ಕೆ ಮುಂದಾಗದಿದ್ದಾಗ ಹೋರಾಟಗಾರರು ಅನಿವಾರ್ಯವಾಗಿ ಧರಣಿ ಸತ್ಯಾಗ್ರಹ ಆರಂಭಿಸಿದ್ದರು. ದಿನೇ ದಿನೇ ಹೋರಾಟ ಉಗ್ರವಾಗುತ್ತಿದ್ದಂತೆಯೇ ಎಚ್ಚೆತ್ತ ಅಧಿಕಾರಿಗಳು ಶಾಲೆಯ ದಾಖಲೆಗಳ ಪರಿಶೀಲನೆಗೆ ಮುಂದಾದಾಗ ಈ ಅಕ್ರಮ ಬೆಳಕಿಗೆ ಬಂದಿದ್ದು, ಇಲಾಖಾ ವಿಚಾರಣೆಯಾಗಿ ಅಂತಿಮ ಆದೇಶ ಹೊರಬಿದ್ದಿದೆ.

### ಈ ಆದೇಶ ಮಕ್ಕಳಿಗೆ ಮಾರಕವಾಗುವದೇ?

ರದ್ದತಿ ಆದೇಶದಿಂದ ಮಕ್ಕಳ ಶೈಕ್ಷಣಿಕ ಭವಿಷ್ಯಕ್ಕೆ ಯಾವುದೇ ತೊಂದರೆ ಆಗುವದಿಲ್ಲ. ಇಲಾಖೆಯೇ ಸ್ಪಷ್ಟಪಡಿಸಿದಂತೆ ಸಧ್ಯ ಇರುವ ಶಾಲಾ ಮಕ್ಕಳನ್ನು ಹತ್ತಿರದ ಸರ್ಕಾರಿ ಶಾಲೆಗೆ ದಾಖಲಿಸಬಹುದು. ಈ ಪ್ರಕ್ರೀಯೆ ಈ ಆದೇಶ ಬಂದ ದಿನದಿಂದಲೇ ಜಾರಿಯಲ್ಲಿರುತ್ತದೆ. ಪಾಲಕರು ನಿರ್ಲಕ್ಷ ವಹಿಸಿದಲ್ಲಿ ಮಾತ್ರ ತೊಂದರೆಯಾಗುವ ಸಾಧ್ಯತೆ ಇರುತ್ತದೆ ಹೊರತು ಈ ಆದೇಶದಿಂದ ಯಾವುದೇ ತೊಂದರೆ ಆಗುವದಿಲ್ಲ.

### ಶಿಕ್ಷಣ ಇಲಾಖೆಯ ಸ್ಪಷ್ಟ ಸಂದೇಶ

ಶಿಕ್ಷಣ ಕ್ಷೇತ್ರದಲ್ಲಿ ಖೊಟ್ಟಿ ದಾಖಲೆಗಳು, ತಪ್ಪು ಮಾಹಿತಿ ಮತ್ತು ನಿಯಮ ಉಲ್ಲಂಘನೆಗೆ ಯಾವುದೇ ಅವಕಾಶ ನೀಡುವುದಿಲ್ಲ ಎಂಬ ಸ್ಪಷ್ಟ ಸಂದೇಶವನ್ನು ಈ ಕ್ರಮದ ಮೂಲಕ ಸರ್ಕಾರ ರವಾನಿಸಿದೆ. ಶಿಕ್ಷಣ ಸಂಸ್ಥೆಗಳು ಕಾನೂನುಬದ್ಧವಾಗಿ ಕಾರ್ಯನಿರ್ವಹಿಸಬೇಕು ಮತ್ತು ಇಲಾಖೆಯನ್ನು ತಪ್ಪುದಾರಿಗೆಳೆಯುವ ಪ್ರಯತ್ನ ಮಾಡಿದರೆ ಕಠಿಣ ಕ್ರಮ ಎದುರಿಸಬೇಕಾಗುತ್ತದೆ ಎಂಬುದನ್ನು ಈ ಆದೇಶ ಮತ್ತೊಮ್ಮೆ ಸ್ಪಷ್ಟಪಡಿಸಿದೆ.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR